Volume: 1
Issue: 225
Bengaluru

# ಅನುಕ್ಷಣ

ಕನ್ನಡ ದಿನ ಪತ್ರಿಕೆ

PRGI: KNKAN/25/A0613

February 20,2026

**ದಿನಾಂಕ: 20-02-2026 ಶುಕ್ರವಾರ**

**ಬೆಲೆ: 5 ರೂ.**




ನವದೆಹಲಿ: ಕೃತಕ ಬುದ್ಧಿಮತ್ತೆಯನ್ನು (ಎ.ಐ) ಪ್ರಜಾಸತಾತ್ಮಕಗೊಳಿಸಬೇಕು ಅದನ್ನು ಒಳಗೊಳ್ಳುವಿಕೆ ಹಾಗೂ ಸಬಲೀಕರಣಕ್ಕೆ ಸಾಧನವಾಗಬೇಕು, ವಿಶೇಷವಾಗಿ ಅಭಿವೃದ್ಧಿ ಶೀಲ ರಾಷ್ಟಗಳಿಗೆ ಪೂರಕವಾಗಿರಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

## ಬೆಂಗಳೂರು ಚಲೋ ಬೃಹತ್ ಪ್ರತಿಭಟನೆ

# ಸಾರಿಗೆ ನೌಕರರ ಮುಷ್ಕರ ಮುಂದೂಡಿಕೆ



**ಬೆಂಗಳೂರು:** ಕರ್ನಾಟಕದ ನಾಲ್ಕು ಸಾರಿಗೆ ನಿಗಮಗಳ (KSRTC, BMTC, NWKRTC, KKRTC)ನೌಕರರು ನಡೆಸಿದ 'ಬೆಂಗಳೂರು ಚಲೋ' ಬೃಹತ್ ಪ್ರತಿಭಟನೆಯ ನಂತರ ಮುಷ್ಕರವನ್ನು ಮುಂದೂಡಿದ್ದಾರೆ. ರಾಜ್ಯಾದ್ಯಂತ ಬಸ್ ಸೇವೆಗಳು ಎಂದಿನಂತೆ ಸಂಚರಿಸಲಿವೆ ಎಂದು ಸಾರಿಗೆ ನೌಕರರ ಜಂಟಿ ಕ್ರಿಯಾ ಸಮಿತಿ (JAC) ಘೋಷಿಸಿದೆ.

ಫ್ರೀಡಂ ಪಾರ್ಕ್‌ನಲ್ಲಿ ನಡೆದ ಪ್ರತಿಭಟನೆಯಲ್ಲಿ ಸಾವಿರಾರು ನೌಕರರು ಭಾಗವಹಿಸಿ, 38 ತಿಂಗಳ ವೇತನ ಬಾಕಿ (1,785 ಕೋಟಿ) ಮತ್ತು ವೇತನ ಪರಿಷ್ಕರಣೆಯನ್ನು ಒತ್ತಾಯಿಸಿದ್ದರು. ಸರ್ಕಾರ ಸಂಜೆ 4 ಗಂಟೆಯೊಳಗೆ ಸ್ಪಷ್ಟ ನಿಲುವು ತಿಳಿಸಬೇಕು ಎಂದು ಡೆಡ್‌ಲೈನ್ ನೀಡಲಾಗಿತ್ತು. ಸರ್ಕಾರ 26 ತಿಂಗಳ ಬಾಕಿ (1,271.92 ಕೋಟಿ) ಪಾವತಿಸಲು ಅನುಮೋದಿಸಿದ್ದರೂ, ನೌಕರರು ಸಂಪೂರ್ಣ 38 ತಿಂಗಳನ್ನು ಒತ್ತಾಯಿಸಿ ಪ್ರತಿಭಟನೆ ಮುಂದುವರಿಸಿದ್ದರು.ಗುರುವಾರ ಸಂಜೆ ನಡೆದ ಚರ್ಚೆಯ ನಂತರ ಜಂಟಿ ಕ್ರಿಯಾ ಸಮಿತಿ ಮುಷ್ಕರವನ್ನು ಸ್ಥಗಿತಗೊಳಿಸಿದೆ. 'ಸರ್ಕಾರ ಬಜೆಟ್ ಸಭೆ ಕರೆದಿದ್ದು, ಅಲ್ಲಿ ವೇತನ ಹೆಚ್ಚಳ ಮತ್ತು ಬಾಕಿ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಿದೆ. ಆ ನಿರ್ಧಾರ ನೋಡಿ ಮುಂದಿನ ಹೆಜ್ಜೆ ಇಡೋಣ. ಬೇಡಿಕೆಗಳನ್ನು ಬಿಡುವುದಿಲ್ಲ' ಎಂದು ಸಮಿತಿ ಹೇಳಿದೆ.

### ಸರ್ಕಾರದ ಪ್ರತಿಕ್ರಿಯೆ

ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೌಕರರೊಂದಿಗೆ ಹಲವು ಸಭೆಗಳನ್ನು ನಡೆಸಿದ್ದಾರೆ. ಏಖಖಖಿಆ ಎಂಡಿ ಅಕ್ರಂ ಪಾಷಾ ಹೇಳಿಕೆಯಲ್ಲಿ 'ಸರ್ಕಾರ ನಿವೃತ್ತ ನೌಕರರ ಬೇಡಿಕೆಗಳನ್ನು ಈಡೇರಿಸಿದೆ. ಆರ್ಥಿಕ ಪರಿಸ್ಥಿತಿ ನೋಡಿಕೊಂಡು ತೀರ್ಮಾನ ಮಾಡಲಾಗುತ್ತಿದೆ. ಮಾತುಕತೆಗೆ ಬಾಗಿಲು ತೆರೆದಿದೆ' ಎಂದಿದ್ದಾರೆ. ಬಜೆಟ್‌ನಲ್ಲಿ ಹಣ ನಿಗದಿಪಡಿಸಿ ಅನುದಾನ ಬಿಡುಗಡೆ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

ನೌಕರರು ಸರ್ಕಾರದ ನಿರ್ಧಾರವನ್ನು ಸಂಪೂರ್ಣವಾಗಿ ಒಪ್ಪದಿದ್ದರೂ, ಮುಷ್ಕರವನ್ನು ಮುಂದೂಡಿ ಮಾತುಕತೆಗೆ ಅವಕಾಶ ನೀಡಿದ್ದಾರೆ. ಇದರಿಂದ ರಾಜ್ಯದ ಜನರಿಗೆ ನಾಳೆಯಿಂದ ಬಸ್ ಸೇವೆಯಲ್ಲಿ ತೊಂದರೆ ಇಲ್ಲದಂತಾಗಿದೆ. ಆದರೆ ಬೇಡಿಕೆಗಳು ಈಡೇರದಿದ್ದರೆ ಮುಂದೆ ಮತ್ತೆ ಹೋರಾಟ ತೀವ್ರಗೊಳ್ಳಬಹುದು ಎಂಬ ಎಚ್ಚರಿಕೆಯನ್ನು ನೌಕರರು ನೀಡಿದ್ದಾರೆ.

ಪ್ರಯಾಣಿಕರು ಬಸ್ ಸೇವೆಯನ್ನು ಸಾಮಾನ್ಯವಾಗಿ ಉಪಯೋಗಿಸಬಹುದು, ಆದರೆ ಯಾವುದೇ ಬದಲಾವಣೆಗಳಿಗಾಗಿ ಅಧಿಕೃತ ಸೂಚನೆಗಳನ್ನು ಪರಿಶೀಲಿಸಿ.

## ರಾಜ್ಯದ ಹಿತಕ್ಕಾಗಿ ಧ್ವನಿ ಎತ್ತಿ :ಗುಂಡೂರಾವ್

**ಬೆಂಗಳೂರು:** ಶೇ.40 ಕಮಿಷನ್ ದಂಧೆಯಿಂದ ಬೇಸತ್ತು ಜನ ನಿಮ್ಮನ್ನು ವಿರೋಧ ಪಕ್ಷದಲ್ಲಿ ಕೂರಿಸಿದ್ದರೂ, ಎಡಿಟ್ ಮಾಡಿದ ಫೋಟೋ ಹಿಡಿದು ಸುಳ್ಳು ಹರಡುವ ನೀಚತನ ಬಿಟ್ಟಿಲ್ಲ ಎಂದು ಬಿಜೆಪಿ ವಿರುದ್ಧ ಸಚಿವ ದಿನೇಶ್ ಗುಂಡೂರಾವ್ ಅವರು ಕಿಡಿಕಾರಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಆರೋಗ್ಯ ಇಲಾಖೆ ಹದಗೆಟ್ಟಿದೆ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯೆ ನೀಡಿರುವ ಅವರು, ಕಮಿಷನ್ ಮತ್ತು ಭ್ರಷ್ಟಾಚಾರ ಎಂಬುದು ಬಿಜೆಪಿಯ ಮೈಗಂಟಿದ ಚರ್ಮ ಅನ್ನೋದು ಇಡೀ ದೇಶಕ್ಕೇ ಗೊತ್ತಿರುವ ಸತ್ಯ.



ಶೇ.40 ಕಮಿಷನ್ ದಂಧೆಯಿಂದ ಬೇಸತ್ತು ಜನ ನಿಮ್ಮನ್ನು ವಿರೋಧ ಪಕ್ಷದಲ್ಲಿ ಕೂರಿಸಿದ್ದರೂ, ಎಡಿಟ್ ಮಾಡಿದ ಫೋಟೋ ಹಿಡಿದು ಸುಳ್ಳು ಹರಡುವ ನೀಚತನ ಬಿಟ್ಟಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ..

ಆರೋಗ್ಯ ಇಲಾಖೆಯಲ್ಲಿ ನಾವು ಅತ್ಯಂತ ಪಾರದರ್ಶಕ ಆಡಳಿತ ನೀಡುತ್ತಿದ್ದೇವೆ, ಧೈರ್ಯವಿದ್ದರೆ ವಾಸ್ತವದ ಅಂಕಿಅಂಶಗಳನ್ನು ನೋಡಿ ಮಾತನಾಡಿ ಎಂದು ಸವಾಲು ಹಾಕಿದ್ದಾರೆ. ಕೇಂದ್ರದ ನಿಮ್ಮದೇ ಮೋದಿ ಸರ್ಕಾರ NHM ಅನುದಾನ ತಡೆಹಿಡಿದಿದ್ದರೂ ರಾಜ್ಯದ ಬಡ ರೋಗಿಗಳಿಗೆ ತೊಂದರೆಯಾಗಬಾರದೆಂದು ನಮ್ಮ ಕಾಂಗ್ರೆಸ್ ಸರ್ಕಾರ ಈಗಾಗಲೇ ರೂ.30 ಕೋಟಿ ಹೆಚ್ಚುವರಿ ಅನುದಾನ ಬಿಡುಗಡೆ ಮಾಡಿದೆ. ಇದಲ್ಲದೆ ರೂ.50 ಕೋಟಿ ಹಣವನ್ನು ಔಷಧಿ ಖರೀದಿಗೆ ಮೀಸಲಿಟ್ಟು, 496 ಅಗತ್ಯ ಔಷಧಿಗಳ ಪೂರೈಕೆಗೆ ಕ್ರಮ ಕೈಗೊಂಡಿದ್ದೇವೆ. GeM ಪೋರ್ಟಲ್ ಮೂಲಕವೇ ಅತ್ಯಂತ ಪಾರದರ್ಶಕವಾಗಿ ಖರೀದಿ ನಡೆಯುತ್ತಿದೆ.

## ವಿಲೇವಾರಿ ವಿರೋಧಿಸುವವರ ಕ್ಷೇತ್ರದ ಕಸ ತೆಗೆಸುವುದಿಲ್ಲ

**ಬೆಂಗಳೂರು:** ಬಿಜೆಪಿ ನಾಯಕರು ಕಸ ವಿಲೇವಾರಿಗೆ ಬಿಡುವುದು ಬೇಡ. ಅವರೇ ಕಸ ಇಟ್ಟುಕೊಳ್ಳಲಿ. ಯಾರು ಬಿಡುವುದಿಲ್ಲವೋ, ಅಂಥವರ ಕ್ಷೇತ್ರದಲ್ಲಿ ಕಸವನ್ನೇ ತೆಗೆಯುವುದಿಲ್ಲ, ತೆಗೆಸುವುದಿಲ್ಲ. ಆಗ ಜನರೇ ಅವರಿಗೆ ಉಗಿಯುತ್ತಾರೆ. ಮೈಕ್ ಹಾಕಿ ಪ್ರಚಾರ ಮಾಡಿಸುತ್ತೇನೆ. ಕಾಲನ್ನು ಕಟ್ಟಿಕೊಳ್ಳಲು ಆಗುತ್ತದೆಯೇ? ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.

ಅಸ್ಸಾಂಗೆ ತೆರಳುವ ಮುನ್ನ ಸದಾಶಿವನಗರದ ನಿವಾಸದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಏನೇ ಆದರೂ ಕಸ ವಿಲೇವಾರಿಗೆ ಬಿಡುವುದಿಲ್ಲ ಎನ್ನುವ ಬಿಜೆಪಿ ನಾಯಕರ ಹೇಳಿಕೆಗೆ ಪ್ರತಿಕ್ರಿಯಿಸಿ,



ಕಸವನ್ನು ಎಲ್ಲಾದರೂ ಒಂದು ಕಡೆ ಹಾಕಬೇಕಲ್ಲವೇ? ಕಸ ಯಾರದ್ದು, ಅದು ಜನರ ಕಸ. ಮೊದಲಿನಿಂದಲೂ ಹೇಗೆ ಸಂಪ್ರದಾಯವಿತ್ತೋ, ಅದೇ ರೀತಿ ಮಾಡಿಕೊಂಡು ಬರುತ್ತಿದ್ದೇವೆ. ಬಿಜೆಪಿ ಹಾಗೂ ನಮ್ಮ ಸಮಯದಲ್ಲಿ ತೀರ್ಮಾನ ಮಾಡಿದ್ದು ಇದೇ ರೀತಿ ಎಂದರು.

ನಾವು ಅಭಿವೃದ್ಧಿಗೆ ಹಣ ಕೊಟ್ಟಿದ್ದೇವೆ. ಸಾವಿರಾರು ಕೋಟಿ ರೂ.ಗಳನ್ನು ಎಷ್ಟು ಎಂತ ಕೊಡಲು ಆಗುತ್ತದೆ. 20, 30 ಕೋಟಿ ಸೇರಿದಂತೆ 50-100 ಕೋಟಿ ಹಣವನ್ನು ಅಭಿವೃದ್ಧಿಗೆ ಕೊಡುತ್ತಾ ಬಂದಿದ್ದೇವೆ.ಭೂಮಿ ಸಮಸ್ಯೆ ಬಂದ ಕಾರಣಕ್ಕೆ ಎರಡು ಕಡೆ ಅಂತಿಮ ಮಾಡಿದ್ದೇವೆ. ಟೆಂಡರ್ ಕೂಡ ಕರೆಯಲಾಗಿದೆ. ನಮ್ಮ ಕೆಲಸವನ್ನು ನಾವು ಮಾಡುತ್ತಿದ್ದೇವೆ ಎಂದು ತಿಳಿಸಿದರು.

## ನಂದಿನಿ ಉತ್ಪನ್ನ ತಿಂದ್ರೆ ಕ್ಯಾನ್ಸರ್ ಬರುತ್ತೆ ಎಂಬುದು ಸುಳ್ಳು

# ಸುಳ್ಳು ಹೇಳಿದವರ ವಿರುದ್ಧ ಎಫ್‌ಐಆರ್ ದಾಖಲು

**ಬೆಂಗಳೂರು:** ನಂದಿನಿ ಬ್ರ್ಯಾಂಡ್‌ನ ಉತ್ಪನ್ನ ತಿಂದರೆ ಕ್ಯಾನ್ಸರ್ ಬರುತ್ತದೆ ಎನ್ನುವ ಸುದ್ದಿ ಶುದ್ಧ ಸುಳ್ಳು ಎಂದು ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಬಿ.ಶಿವಸ್ವಾಮಿ ಸ್ಪಷ್ಟನೆ ನೀಡಿದ್ದಾರೆ.

ಇತ್ತೀಚೆಗೆ ನಂದಿನಿ ಬ್ರ್ಯಾಂಡ್‌ನ ಉತ್ಪನ್ನ ತಿಂದರೆ ಕ್ಯಾನ್ಸರ್ ಬರುತ್ತೆ ಅಂತಾ ಡಾ.ಶರಣ್ಯ ಸಂತೋಷ್ ಎಂಬುವವರ ಹೇಳಿಕೆ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು.ಹೀಗಾಗಿ ಜನರಲ್ಲಿ ಆತಂಕ ಸೃಷ್ಟಿ ಆಗಿದೆ. ಈ ಕುರಿತು ಸ್ಪಷ್ಟನೆ ನೀಡುರುವ ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಶಿವ ಸ್ವಾಮಿ, ಕೆಎಂಎಫ್ ಉತ್ಪನ್ನ ನೈಸರ್ಗಿಕವಾಗಿ ತಯಾರಿಸುತ್ತಿದ್ದೇವೆ. ಇದುವರೆಗೂ ಕೆಎಂಎಫ್ ಉತ್ಪನ್ನಗಳ ಬಗ್ಗೆ ಯಾವುದೇ ದೂರು ಬಂದಿಲ್ಲ. ಈ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸುದ್ದಿ ಸುಳ್ಳು. ಕೆಎಂಎಫ್ ಉತ್ಪನ್ನಗಳಿಗೆ ಯಾವುದೇ ಕೆಮಿಕಲ್ ಹಾಕಲ್ಲ ಎಂದರು.ಈಗಾಗಲೇ ಡಾ. ಶರಣ್ಯ ಸಂತೋಷ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಕೆಎಂಎಫ್ ಉತ್ಪನ್ನಗಳ ಬಗ್ಗೆ ಇದೇ ರೀತಿ ಅಪಪ್ರಚಾರ ಮಾಡಿದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು. ನಮ್ಮ ಉತ್ಪನ್ನಗಳು ಸಂಪೂರ್ಣ ಸುರಕ್ಷಿತ. ಗ್ರಾಹಕರು ಯಾವುದೇ ಆತಂಕವಿಲ್ಲದೆ ಬಳಸಬಹುದು ಎಂದು ಮನವಿ ಮಾಡಿದ್ದಾರೆ.

### ಆರೋಗ್ಯ ಇಲಾಖೆಯ ವರದಿ

ಅಪಪ್ರಚಾರದ ಹಿನ್ನೆಲೆ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಿಂದ ಪರೀಕ್ಷೆ ನಡೆಸಲಾಗಿದೆ. ವರದಿಯ ಪ್ರಕಾರ ಕೆಎಂಎಫ್‌ನ ಎಲ್ಲಾ ಉತ್ಪನ್ನಗಳು ಸುರಕ್ಷಿತವಾಗಿವೆ. ಮೈಸೂರು ಪಾಕ್, ಮಿಲ್ಕ್ ಪೇಡಾ, ಪನ್ನೀರ್, ವೆನಿಲಾ ಮಿಲ್ಕ್ ಶೇಕ್ ಸೇರಿದಂತೆ ಎಲ್ಲಾ ಉತ್ಪನ್ನಗಳು ಮಾನದಂಡಗಳಿಗೆ ಅನುಗುಣವಾಗಿವೆ ಎಂದು ಆರೋಗ್ಯ ಇಲಾಖೆ ತಿಳಿಸಿದೆ.

### ಅಪಪ್ರಚಾರ ಮಾಡಿದವರ ವಿರುದ್ಧ ಕೆಎಂಎಫ್ ಕಾನೂನು ಕ್ರಮ

ನಂದಿನಿ ಬ್ರಾಂಡ್‌ನ ಕೆಲವು ಉತ್ಪನ್ನಗಳ ಕುರಿತು ಆಧಾರ ರಹಿತ ಆರೋಪಗಳನ್ನು ಮಾಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದಾಗಿ ಕೆಎಂಎಫ್ ಎಫ್‌ಐಆರ್ ದಾಖಲಿಸಿದೆ.

ನಂದಿನಿ ಉತ್ಪನ್ನಗಳನ್ನು ಉಪಯೋಗಿಸಿ ದರೇ ಕ್ಯಾನ್ಸರ್ ಬರುತ್ತದೆ ಎನ್ನುವ ಸುದ್ದಿಯೊಂದು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿತ್ತು. ಈ ಕುರಿತು ಕೆಎಂಎಫ್ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿಯನ್ನು ಹಂಚಿಕೊಂಡಿದ್ದು ತೀವ್ರವಾಗಿ ಖಂಡಿಸಿದೆ.

### ಎಕ್ಸ್‌ನಲ್ಲಿ ಏನಿದೆ?

ನಂದಿನಿ ಬ್ರಾಂಡ್‌ನ ಕೆಲವು ಉತ್ಪನ್ನಗಳ ಕುರಿತು ಸಾಮಾಜಿಕ ಜಾಲತಾಣಗಳ ಮೂಲಕ ಆಧಾರರಹಿತ ಆರೋಪಗಳನ್ನು ಮಾಡಲಾಗುತ್ತಿರುವುದು ನಮ್ಮ ಗಮನಕ್ಕೆ ಬಂದಿದೆ. ನಂದಿನಿ ಉತ್ಪನ್ನಗಳನ್ನು ಸೇವನೆಗೆ ಅಸುರಕ್ಷಿತವೆಂದು ತಪ್ಪಾಗಿ ಪ್ರಚಾರ ಮಾಡಲಾಗುತ್ತಿದ್ದು, ಬಾಲ್ಯದಿಂದಲೇ ನಂದಿನಿ ಬ್ರಾಂಡ್‌ನೊಂದಿಗೆ ಬೆಳೆದಿರುವ ಕೋಟ್ಯಾಂತರ ಗ್ರಾಹಕರಲ್ಲಿ ಅನಗತ್ಯ ಗೊಂದಲ ಉಂಟುಮಾಡಲಾಗಿದೆ.

ಕರ್ನಾಟಕ ಹಾಲು ಮಹಾಮಂಡಳಿಯು ಆಧಾರರಹಿತ, ತಪ್ಪು ದಾರಿಗೆಳೆಯುವ ಮತ್ತು ಬ್ಯಾಂಡ್‌ನ ಮಾನಹಾನಿಕರ ಹೇಳಿಕೆಗಳನ್ನು ತೀವ್ರವಾಗಿ ಖಂಡಿಸುತ್ತಿದ್ದು, ಇಂತಹ ದುರುದ್ದೇಶಪೂರಿತ ಕೃತ್ಯಗಳಲ್ಲಿ ತೊಡಗಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಬದ್ಧವಾಗಿದೆ ಎಂದಿದೆ.

## ಮುಂದಿನ ಚುನಾವಣೆಯಲ್ಲಿ

# ಬಿವೈವಿ ನೇತೃತ್ವದ ತಂಡಕ್ಕೆ ಬಹುಮತ



**ಬೆಂಗಳೂರು:** ಬಿ.ವೈ.ವಿಜಯೇಂದ್ರ ನೇತೃತ್ವದ ತಂಡ ಮುಂದಿನ ವಿಧಾನಸಭಾ ಚುನಾವಣೆಯನ್ನು ಎದುರಿಸಿ ಬಹುಮತ ಸಾಧಿಸಲಿದೆ ಎಂದು ಬಿಜೆಪಿ ರಾಜ್ಯ ಉಸ್ತುವಾರಿ ರಾಧಾಮೋಹನ್ ದಾಸ್ ಅಗರವಾಲ್ ತಿಳಿಸಿದರು.

ಬಿಜೆಪಿ ವಿಶೇಷ ಕಾರ್ಯಕಾರಿಣಿ ಸಭೆಯಲ್ಲಿ ಮಾತನಾಡಿ ಅವರು, ವಿಧಾನಸಭೆ ಮತ್ತು ವಿಧಾನಪರಿಷತ್ತಿನಲ್ಲಿ ಆರ್. ಅಶೋಕ ಮತ್ತು ಛಲವಾದಿ ನಾರಾಯಣ ಸ್ವಾಮಿ ಅವರು ಭ್ರಷ್ಟ ಸರ್ಕಾರವನ್ನು ಕಟ್ಟಿ ಹಾಕುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸದನದ ಒಳಗೆ ಮತ್ತು ಹೊರಗೆ ಈ ಮೂವರ ತಂಡ ಸರ್ಕಾರ ವಿರುದ್ಧ ಹೋರಾಟ ನಡೆಸುತ್ತಿದೆ. ಈ ಸಂಘರ್ಷ ನಿರಂತರವಾಗಿರಲಿ. ಮುಂಬರುವ ವಿಧಾನಸಭಾ ಉಪ ಚುನಾವಣೆಗಳು, ವಿಧಾನ ಪರಿಷತ್, ಸ್ಥಳೀಯ ಸಂಸ್ಥೆ ಚುನಾವಣೆಗಳನ್ನು ಗೆಲ್ಲಬೇಕು. ಇದಕ್ಕೆ ಸಂಘಟಿತ ಪ್ರಯತ್ನ ಇರಬೇಕು ಎಂದು ಸಲಹೆ ನೀಡಿದರು. ರಾಜ್ಯ ಸರ್ಕಾರ ರೋಹಿತ್ ವೇಮುಲಾ ಮಸೂದೆಯಲ್ಲಿ ಎಸ್ ಸಿ ಎಸ್ ಟಿ ಜತೆಗೆ ಮುಸ್ಲಿಮರನ್ನೂ ಸೇರಿಸಿದೆ. ಇದು ಸಾಮಾಜಿಕ ಸಾಮರಸ್ಯ ಹದಗೆಡಲು ಕಾರಣ ಆಗುತ್ತದೆ. ಎಸ್ ಸಿ ಮತ್ತು ಎಸ್ ಟಿಗಳಿಗೆ ಮಾತ್ರ ಈ ಕಾಯ್ದೆ ಅನ್ವಯ ಆಗಬೇಕು ಎಂದು ಅವರು ಹೇಳಿದರು. ಸಾರ್ವಜನಿಕ ಜೀವನದಲ್ಲಿ 50 ವರ್ಷ ಪೂರ್ಣಗೊಳಿಸಿದ ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ ಅವರನ್ನು ಅಭಿನಂದಿಸಲಾಯಿತು.

## ರಾಜ್ಯ ವಕೀಲರ ಪರಿಷತ್ ಚುನಾವಣೆ

# ಕೊಳ್ಳೇಗಾಲದಲ್ಲಿ ಮತಯಾಚನೆ





**ಕೊಳ್ಳೇಗಾಲ:** ಕರ್ನಾಟಕ ರಾಜ್ಯ ವಕೀಲರ ಪರಿಷತ್ ಚುನಾವಣೆಯ ಅಂಗವಾಗಿ ವಕೀಲೆ ಮಮತಾ ಅವರು ಕೊಳ್ಳೇಗಾಲದಲ್ಲಿ ಪ್ರಚಾರ ನಡೆಸಿ ವಕೀಲ ಸಮುದಾಯದವರನ್ನು ಭೇಟಿಯಾಗಿ ಮತಯಾಚಿಸಿದರು.

ಈ ಸಂದರ್ಭದಲ್ಲಿ ಕೊಳ್ಳೇಗಾಲ ವಕೀಲರ ಸಂಘದ ಅಧ್ಯಕ್ಷ ಬಸವರಾಜ್ ಸೇರಿದಂತೆ ಅನೇಕ ವಕೀಲರು ಉಪಸ್ಥಿತರಿದ್ದರು. ವಕೀಲರ ಹಕ್ಕುಗಳ ರಕ್ಷಣೆ, ಕಲ್ಯಾಣ ಯೋಜನೆಗಳ ಬಲವರ್ಧನೆ ಹಾಗೂ ಸಂಘಟನೆಯ ಅಭಿವೃದ್ಧಿಗಾಗಿ ತಮ್ಮನ್ನು ಬೆಂಬಲಿಸುವಂತೆ ವಕೀಲೆ ಮಮತಾ ಮನವಿ ಮಾಡಿದರು.

## ವಿಶೇಷ ಮಕ್ಕಳೊಂದಿಗೆ ಹುಟ್ಟುಹಬ್ಬ ಆಚರಿಸಿಕೊಂಡ ಸಚಿವೆ ಲಕ್ಷ್ಮೀ ಹೆಬ್ಬಾಳಕರ್

# ಇಲಾಖೆ ಸಿಬ್ಬಂದಿ ವರ್ಗದವರಿಂದ ಸಚಿವರಿಗೆ ಶುಭ ಹಾರೈಕೆ



**ಬೆಂಗಳೂರು:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು, ಮಲ್ಲೇಶ್ವರದಲ್ಲಿರುವ ಹಿಂದೂ ಸೇವಾ ಪ್ರತಿಷ್ಠಾನದ ಪ್ರಕಲ್ಪವಾದ ಅರುಣ ಚೇತನ ವಿಶೇಷ ಶಾಲೆಯಲ್ಲಿ ವಿಶೇಷ ಚೇತನ ಮಕ್ಕಳೊಂದಿಗೆ ಕೇಕ್ ಕತ್ತರಿಸುವ ತಮ್ಮ ಹುಟ್ಟುಹಬ್ಬ ವಿಶೇಷವಾಗಿ ಆಚರಿಸಿಕೊಂಡರು.

ಈ ವೇಳೆ ಮಾತನಾಡಿದ ಸಚಿವರು, ಅರುಣ ಚೇತನ ವಿಶೇಷ ಸಂಸ್ಥೆ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ. ಸಂಸ್ಥೆಯ ಬೆಳವಣಿಗೆಗಾಗಿ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು ಎಂದರು. ವಿಶೇಷ ಚೇತನ ಮಕ್ಕಳೊಂದಿಗೆ ಕೆಲ ಕಾಲ ಬೆರೆತು, ಮಾತುಕತೆ ನಡೆಸಿದರು. ಅರುಣ ಚೇತನ ವಿಶೇಷ ಸಂಸ್ಥೆ ವತಿಯಿಂದ ಸಚಿವರನ್ನು ಸನ್ಮಾನಿಸಲಾಯಿತು.

### ಅಂಗನವಾಡಿ ಮಕ್ಕಳೊಂದಿಗೆ ಕೇಕ್ ಕತ್ತರಿಸಿದ ಸಚಿವರು

ಮಲ್ಲೇಶ್ವರದ 18ನೇ ಕ್ರಾಸ್ ನಲ್ಲಿರುವ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳೊಂದಿಗೆ ಸಚಿವರು ಕೇಕ್ ಕತ್ತರಿಸಿ ಹುಟ್ಟುಹಬ್ಬ ಆಚರಿಸಿಕೊಂಡರು.

### ಇಲಾಖೆ ಸಿಬ್ಬಂದಿ ವರ್ಗದವರಿಂದ ಸಚಿವರಿಗೆ ಸನ್ಮಾನ

ಬೆಂಗಳೂರಿನ ವಿಧಾನಸೌಧದ ಕಚೇರಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಅಭಿವೃದ್ಧಿ ನಿಗಮ, ಸಮಗ್ರ ಮಕ್ಕಳ ರಕ್ಷಣಾ ಯೋಜನೆ (ಐಸಿಪಿಎಸ್) ಸೇರಿದಂತೆ ಇಲಾಖೆ ವ್ಯಾಪ್ತಿಯ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ಹುಟ್ಟುಹಬ್ಬಕ್ಕೆ ಶುಭಕೋರಿದರು.

ಬಳಿಕ ಬೆಂಗಳೂರಿನ ಸರ್ಕಾರಿ ಗೃಹ ಕಚೇರಿಯಲ್ಲಿ ಸಿಬ್ಬಂದಿ ವರ್ಗದವರು, ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಜೊತೆ ಕೇಕ್ ಕತ್ತರಿಸಿ ಹುಟ್ಟುಹಬ್ಬ ಆಚರಿಸಿಕೊಂಡರು.

ಈ ವೇಳೆ ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ್ ಹಟ್ಟಿಹೊಳಿ, ಮಹಿಳಾ ಅಭಿವೃದ್ಧಿ ನಿಮಗದ ಅಧ್ಯಕ್ಷರಾದ ಜಿ.ಪದ್ಮಾವತಿ, ಇಲಾಖೆಯ ಕಾರ್ಯದರ್ಶಿ ಡಾ.ಶಾಮ್ಲಾ ಇಕ್ಬಾಲ್, ಮಹಿಳಾ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಮಹೇಶ್ ಬಾಬು, ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ನಿರ್ದೇಶಕರಾದ ಸ್ನೇಹಾ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ನಿರ್ದೇಶಕರಾದ ಅಶೋಕ್ ಕುಮಾರ್ ಸೇರಿದಂತೆ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.



# ದೊಡ್ಡ ಬೆಕ್ಕುಗಳ ಉಳಿವಿಗೆ 7 ಸಾವಿರ ಕಿ.ಮೀ ರ‍್ಯಾಲಿ



■ ರಾಜಯೋಗ, ಚಾಮರಾಜನಗರ

ದೊಡ್ಡ ಬೆಕ್ಕುಗಳ ಪ್ರಜಾತಿಗೆ ಸೇರಿರುವ ಹುಲಿ, ಸಿಂಹ, ಚಿರತೆ, ಚೀತಾ, ಹಿಮ ಚಿರತೆ, ಜಾಗ್ವಾರ್ ಹಾಗೂ ಪ್ಯೂಮಾಗಳ ರಕ್ಷಣೆಗೆ ಹಾಗೂ ದೊಡ್ಡಬೆಕ್ಕುಗಳ ಆವಾಸಗಳ ಉಳಿವಿಗಾಗಿ ಧಾತ್ರಿ ಇಂಟರ್‌ನ್ಯಾಷನಲ್ ಫೌಂಡೇಷನ್, ವೈಲ್ಡ್ ಲೈಫ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾ ಹಾಗೂ ಇರಾಲೆ ಸಂಸ್ಥೆಯ ನೇತೃತ್ವದಲ್ಲಿ ದೇಶದಾದ್ಯಂತ 7,000 ಕಿ.ಮೀ ಬೈಕ್ ರ‍್ಯಾಲಿ ಹಮ್ಮಿಕೊಂಡಿದೆ.

ರ‍್ಯಾಲಿ ಫಾರ್ ಬಿಗ್ ಕ್ಯಾಟ್' ಹೆಸರಿನಲ್ಲಿ ನಡೆಯುತ್ತಿರುವ ಬೈಕ್ ರ‍್ಯಾಲಿ ನವದೆಹಲಿಯಿಂದ ಆರಂಭವಾಗಿದ್ದು ಕೇರಳದಲ್ಲಿ ಸಮಾಪನಗೊಳ್ಳಲಿದೆ. 30 ದಿನಗಳ ಜಾಥಾದಲ್ಲಿ ವನ್ಯಜೀವಿ ಸಂಶೋಧಕರು, ಪರಿಸರ ಪ್ರಿಯರು, ಬೈಕ್ ರೈಡರ್ಸ್‌ಗಳು ಹಾಗೂ ಉತ್ಸಾಹಿ ಯುವ ಪಡೆ ಭಾಗವಹಿಸಿದ್ದು ರ‍್ಯಾಲಿ ಸಾಗುವ ಮಾರ್ಗದಲ್ಲಿ ದೊಡ್ಡ ಬೆಕ್ಕುಗಳ ಸಂತತಿ ಉಳಿವಿಗೆ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

ಕಾಡಂಚಿನ ಗ್ರಾಮಗಳಲ್ಲಿ ವಾಸವಾಗಿರುವ ಜನರು, ಅರಣ್ಯ ಇಲಾಖೆ ಸಿಬ್ಬಂದಿ ಹಾಗೂ ಅಧಿಕಾರಿಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳನ್ನು ಒಗ್ಗೂಡಿಸಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ನವದೆಹಲಿಯಿಂದ ರಾಜಸ್ತಾನದಲ್ಲಿರುವ ಚಿರತೆಗಳ ನೆಲೆಯಾದ ಜವಾಯ್, ಮಧ್ಯಪ್ರದೇಶದ ಕುನೋ ರಾಷ್ಟ್ರೀಯ ಉದ್ಯಾನ, ಸತ್ಪುರ, ಗುಜರಾತ್‌ನ ಗಿರ್ ಅರಣ್ಯ, ಆಂಧ್ರಪ್ರದೇಶದ ನಾಗಾರ್ಜುನ ಸಾಗರದ ಮಾರ್ಗವಾಗಿ ಕರ್ನಾಟಕದ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶವನ್ನು ತಲುಪಿದೆ.

ಮುಂದೆ ತಮಿಳುನಾಡಿನ ಮಧುಮಲೈ ಅಭಯಾರಣ್ಯ ಹಾಗೂ ಕಾಲಕ್ಕಾಡ್ ತಲುಪುವ ಬೈಕ್ ರ‍್ಯಾಲಿ ಕೇರಳದ ಪೆರಿಯಾರ್‌ನಲ್ಲಿ ಸಮಾಪನಗೊಳ್ಳಲಿದೆ. ಬುಧವಾರ ಬಂಡೀಪುರ ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಾಗೃತಿ ಕಾರ್ಯಕ್ರಮ ನಡೆಸಿದ ಸಂಸ್ಥೆಯು ಅರಣ್ಯದಂಚಿನ ಗ್ರಾಮಸ್ಥರು, ಕಾಲೇಜು ವಿದ್ಯಾರ್ಥಿಗಳು ಹಾಗೂ ಪರಿಸರಾಸಕ್ತರ ವಿಚಾರ ವಿನಿಮಯ ನಡೆಸಿತು.

ವನ್ಯಜೀವಿ ತಜ್ಞ ಮದನ್ ಕುಮಾರ್, ಧಾತ್ರಿ ಸಂಸ್ಥೆಯ ನಿಶಾಂತ್ ಹಾಗೂ ಇರಾಲೆ ಸಂಸ್ಥೆಯ ಯೋಗಾನಂದ್ ಚಂದ್ರಯ್ಯ ನೇತೃತ್ವದ ತಜ್ಞರ ತಂಡ ದೊಡ್ಡ ಬೆಕ್ಕುಗಳ ಉಳಿವಿಗೆ ಸಮಾಜದ ಸಹಭಾಗಿತ್ವದ ಅಗತ್ಯತೆಯನ್ನು ಒತ್ತಿ ಹೇಳಿತು. ಅರಣ್ಯದೊಳಗೆ ಆಹಾರ ಸರಪಳಿಯನ್ನು ನಿಯಂತ್ರಿಸುವ ಹುಲಿಗಳು ಉಳಿದರೆ ಮಾತ್ರ ಪರಿಸರ ಸಮತೋಲನದಿಂದ ಕೂಡಿರುತ್ತದೆ. ಹುಲಿಗಳ ಸಂತತಿ ನಾಶವಾದರೆ ಅರಣ್ಯದೊಳಗೆ ಸಸ್ಯಹಾರಿ ಪ್ರಾಣಿಗಳ ಸಂತತಿ ಹೆಚ್ಚಾಗಿ ಮೇವಿನ ಕೊರತೆ ಎದುರಾಗುತ್ತದೆ. ಕಾಡಂಚಿನ ಕೃಷಿ ಭೂಮಿಯಲ್ಲಿ ಬೆಳೆಯುವ ಬೆಳೆಗಳು ಕಾಡುಪ್ರಾಣಿಗಳ ಪಾಲಾಗುತ್ತದೆ. ಮಾನವ ಪ್ರಾಣಿ ಸಂಘರ್ಷ ಮಿತಿಮೀರುತ್ತದೆ. ಈ ನಿಟ್ಟಿನಲ್ಲಿ ಹುಲಿಗಳನ್ನು ಉಳಿಸಿಕೊಳ್ಳುವುದು ಬಹಳ ಮುಖ್ಯ ಎಂದು ತಜ್ಞರು ಅಭಿಪ್ರಾಯಪಟ್ಟರು.

ರಾಜ್ಯದಲ್ಲಿ ಅತಿ ಹೆಚ್ಚು ಹುಲಿಗಳ ಆವಾಸ ಹೊಂದಿರುವ ಬಂಡೀಪುರ ಅಭಯಾರಣ್ಯದೊಳಗೆ ಮಾನವ ಹಸ್ತಕ್ಷೇಪ ನಿಲ್ಲಬೇಕು, ಕಾಡಂಚಿನ ನಿವಾಸಿಗಳು ವನ್ಯಜೀವಿಗಳೊಂದಿಗೆ ಸಹಬಾಳ್ವೆ ನಡೆಸಬೇಕಾದ ಅಗತ್ಯತೆ ಇದೆ ಎಂದು ತಜ್ಞರು ಸಲಹೆ ನೀಡಿದರು.

ಅಭಯಾರಣ್ಯದೊಳಗಿರುವ ಹೆದ್ದಾರಿಗಳಲ್ಲಿ ವನ್ಯಜೀವಿಗಳ ಫೋಟೊ ಹಾಗೂ ವಿಡಿಯೊ ಚಿತ್ರೀಕರಣ ಮಾಡುವುದು ಪ್ರಾಣಕ್ಕೆ ಕುತ್ತು ತರುವ ಸಾಧ್ಯತೆ ಹೆಚ್ಚಾಗಿರುತ್ತವೆ. ಪ್ರಾಣಿಗಳ ಸೆರೆ ಕಾರ್ಯಾಚರಣೆ ಮಾಡು ವಾಗಲೂ ಸಾರ್ವಜನಿಕರು ವಿಡಿಯೊ ಚಿತ್ರೀಕರಣದಂತಹ ದುಸ್ಸಾಹಕ್ಕೆ ಕೈಹಾಕಬಾರದು ಎಂದು ಸಲಹೆ ನೀಡಿದರು.

# ಸಫಾರಿಗೆ ಅನುಮತಿ; ರೈತರ ಆಕ್ರೋಶ




■ ರಾಜಯೋಗ, ಮೈಸೂರು

ಸಫಾರಿ ಆರಂಭಿಸಲು ಅನುಮತಿ ನೀಡಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ಮುಖಂಡರು ಅರಣ್ಯ ಭವನಕ್ಕೆ ಮುತ್ತಿಗೆ ಹಾಕಲು ಯತ್ನಿಸಿದರು.

ಬೇಡ ಬೇಡ ಸಫಾರಿ ಬೇಡ, 'ಬೇಕೆ ಬೇಕು ನ್ಯಾಯ ಬೇಕು' 'ಸಫಾರಿ ಆರಂಭಿಸಿರುವ ಸರ್ಕಾರಕ್ಕೆ ದಿಕ್ಕಾರ' ಎಂದು ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಅರಣ್ಯ ಸಚಿವರು ಹಂತ– ಹಂತವಾಗಿ ಸಫಾರಿ ಆರಂಭಿಸುತ್ತೇವೆ ಎಂದು ಹೇಳಿಕೆ ನೀಡಿ–ದ್ದಾರೆ. ರಾಜಕಾರಣಿಗಳ ಮಕ್ಕಳು ಬೆಳಿಗ್ಗೆ ಕಾಡು ನೋಡಿ ಮಜಾ ಮಾಡಿ ಮನೆಯಲ್ಲಿ ಆರಾಮವಾಗಿ ಮಲಗುತ್ತಾರೆ. ಆದರೆ ಅನ್ನ ನೀಡುವ ರೈತ ಕಾಡಂಚಿನಲ್ಲಿ ಬೆಳಿಗ್ಗೆ ವ್ಯವಸಾಯ ಮಾಡಿ, ರಾತ್ರಿ ಫಸಲು ಕಾದು ಕಾಡುಪ್ರಾಣಿಗಳಿಗೆ ಬಲಿಯಾಗುತ್ತಿದ್ದಾರೆ. ಸಫಾರಿಯಿಂದ ಯಾರಿಗೂ ಲಾಭವಿಲ್ಲ. ದೇವಸ್ಥಾನದ ಪೂಜೆಗೆ ಕಾಡಿಗೆ ಹೋಗಲು ಅವಕಾಶವಿಲ್ಲ. ಆದರೆ ಮದ್ಯ, ಡಿಜೆ ಹಾಕುವವರಿಗೆ ಅವಕಾಶ ನೀಡುತ್ತಿರುವುದು ಖಂಡನೀಯ' ಎಂದರು.'ರೈತರು ಭಿಕ್ಷೆ ಬೇಡಿ ನೂರು ಕೋಟಿ ಕೊಡುತ್ತೇವೆ ನೀವು ಕುಟುಂಬ ಸಮೇತರಾಗಿ ಬಂದು ಬದುಕಿತ್ತೀರೇ. ಮೈಸೂರು, ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರು ಯಾಕೆ ಮಾತನಾಡುತ್ತಿಲ್ಲ. ಸಫಾರಿ ನಿಂತ ಬಳಿಕ ಕಾಡು ಪ್ರಾಣಿಗಳ ಹಾವಳಿ ನಿಂತಿದೆ. ಹೀಗಾಗಿ ತಕ್ಷಣವೇ ಸಫಾರಿ ನಿಲ್ಲಿಸಬೇಕು' ಎಂದು ಒತ್ತಾಯಿಸಿದರು. ಸಫಾರಿಯಿಂದ ಸಾಕಷ್ಟು ಅನ್ಯಾಯವಾಗುತ್ತಿದೆ. ಬಂಡವಾಳಶಾಹಿ ಒತ್ತಡಕ್ಕೆ ಬಲಿಯಾಗಿ ರೆಸಾರ್ಟ್ ಮಾಡುತ್ತಿರುವ ಗುಲಾಮಗಿರಿಗೆ ಒಲಗಾಗಿ ಸಫಾರಿ ಆರಂಭಿಸುತ್ತಿದ್ದಾರೆ. ಸಫಾರಿಯಿಂದ ಕಾಡು ಪ್ರಾಣಿಗಳು ನಾಡಿಗೆ ಬರುತ್ತಿದ್ದು, ರೈತರನ್ನು ಬಲಿ ಪಡೆಯುತ್ತಿದೆ. ಹೆಣ್ಣು ಮಕ್ಕಳು ವಿಧವೆಯರಾಗುತ್ತಿದ್ದಾರೆ' ಎಂದು ಆಕ್ರೋಶ ವ್ಯಕ್ತಪಡಿಸಿದರು. 'ಸಫಾರಿ ಆರಂಭಿಸುವ ನಿರ್ಧಾರದಿಂದ ಹಿಂದೆ ಸರಿಯದಿದ್ದರೆ ಅರಣ್ಯ ಸಚಿವರು ಮೈಸೂರಿಗೆ ಪ್ರವೇಶಿಸಲು ಬಿಡುವುದಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕಪ್ಪು ಬಾವುಟ ಪ್ರದರ್ಶಿಸುತ್ತೇವೆ' ಎಂದು ಎಚ್ಚರಿಕೆ ನೀಡಿದರು.

# ಸೋಲು-ಗೆಲುವು ಸಮನಾಗಿ ಸ್ವೀಕರಿಸಿ: ಎಸ್.ನಿರಂಜನ್



■ ರಾಜಯೋಗ, ಶಿಕಾರಿಪುರ

'ಈ ನಾಡಿನ ಸಾಂಪ್ರದಾಯಿಕ ಕ್ರೀಡೆಯಾದ ಕಬಡ್ಡಿಯನ್ನು ಉಳಿಸಿ ಬೆಳೆಸುವ ಕೆಲಸ ಈಗ ಹೆಚ್ಚಾಗುತ್ತಿರುವುದು ಶ್ಲಾಘನೀಯ' ಎಂದು ತೊಗರ್ಸಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಎಸ್.ನಿರಂಜನ್ ಹೇಳಿದರು. ತಾಲ್ಲೂಕಿನ ತೊಗರ್ಸಿ ಗ್ರಾಮದಲ್ಲಿ ಈಚೆಗೆ ನಡೆದ ಹೊನಲು ಬೆಳಕಿನ ಕಬಡ್ಡಿ ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡಿದರು.

ಪ್ರೋ ಕಬ್ಬಡಿ ಆರಂಭಗೊಂಡ ನಂತರ ಗ್ರಾಮೀಣ ಪ್ರದೇಶದಲ್ಲಿ ಹೆಚ್ಚಿನ ಪಂದ್ಯಾವಳಿ ಆಯೋಜಿಸುವ ಪರಂಪರೆ ಹೆಚ್ಚಾಗಿದೆ. ವಾಲಿಬಾಲ್ ಕಬ್ಬಡಿ ಕ್ರೀಡೆಯಲ್ಲಿ ಯುವಜನತೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಅದು ಇನ್ನೂ ಹೆಚ್ಚಿನ ಮಹತ್ವ ಪಡೆದುಕೊಳ್ಳುವಂತಾಗಲಿ. ಕ್ರೀಡೆಯಲ್ಲಿ ಪಾಲ್ಗೊಂಡವರು ಸೋಲು–ಗೆಲುವನ್ನು ಸಮನಾಗಿ ಸ್ವೀಕರಿಸಬೇಕು ಎಂದರು.

ಮಳೇಹಿರೇಮಠದ ಮಹಾಂತದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. 20ಕ್ಕೂ ಹೆಚ್ಚು ತಂಡಗಳು ಪಾಲ್ಗೊಂಡಿದ್ದವು. ಹೊಸಕೊಪ್ಪದ ಅಭಿಮನ್ಯು ಬಾಯ್ಸ್ ಪ್ರಥಮ ಸ್ಥಾನ (15,000), ಮಲ್ಲಿಕಾರ್ಜುನ ಬುಲ್ಸ್ ತೊಗರ್ಸಿ ದ್ವಿತೀಯ ಸ್ಥಾನ (7,500) ಹಾಗೂ ಹೊಸಕೆರೆ ಬಾಯ್ಸ್ ತೃತೀಯ ಸ್ಥಾನ (,3500) ಪಡೆದವು.

ಮುಖಂಡರಾದ ಸಣ್ಣಹನುಮಂತಪ್ಪ, ಪರಮೇಶ್ವರಪ್ಪ, ಚನ್ನವೀರಸ್ವಾಮಿ, ಬಸವಣ್ಯಯ್ಯ, ಮೋಹನ್‌ಗೌಡ್ರು, ಮಲ್ಲೇಶಪ್ಪ, ಆನಂದಯ್ಯ, ಸದಾನಂದ ಆಚಾರ್, ಶಿಕ್ಷಕ ಸಿದ್ಧಲಿಂಗಯ್ಯ, ಆಂಜನೇಯ ಇತರರು ಇದ್ದರು.

# ಬಜೆಟ್‌ನಲ್ಲಿ ನಮಗಾಗಿ 200 ಕೋಟಿ ರೂ. ಅನುದಾನ ಕೊಡಿ: ತೃತೀಯ ಲಿಂಗ ಸಮುದಾಯ ಆಗ್ರಹ

■ ರಾಜಯೋಗ



ಬಜೆಟ್‌ನಲ್ಲಿ ನಮಗೂ ಅನುದಾನ ಕೊಡಿ ಎಂದು ತೃತೀಯ ಲಿಂಗ ಸಮುದಾಯ ಬೇಡಿಕೆ ಇಟ್ಟಿದೆ. ಮಾರ್ಚ್‌ನಲ್ಲಿ ಈ ಬಾರಿಯ ಬಜೆಟ್ ಮಂಡನೆ ಆಗಲಿದ್ದು, ತೃತೀಯ ಲಿಂಗ ಸಮುದಾಯದ ಅಭಿವೃದ್ಧಿಗಾಗಿ 200 ಕೋಟಿ ರೂ. ಅನುದಾನ ಮೀಸಲಿಡಬೇಕು ಎಂದು ತೃತೀಯ ಲಿಂಗ ಅಲ್ಪಸಂಖ್ಯಾತರ ಸಂಘ ಆಗ್ರಹಿಸಿದೆ.

ಈ ಹಿಂದೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವಾಗ ವರ್ಷಕ್ಕೆ ರೂ.200 ಕೋಟಿ ಅನುದಾನ ನೀಡುವುದಾಗಿ ಭರವಸೆ ನೀಡಿತ್ತು. ಆದರೆ ಮೂರು ವರ್ಷದಿಂದ ನಮಗೇನೂ ಸಿಕ್ಕಿಲ್ಲ. ಪ್ರಣಾಳಿಕೆಯ ಪದಗಳು ಬರೀ ಪ್ರಣಾಳಿಕೆಗೆ ಮಾತ್ರ ಸೀಮಿತವಾಗಿದೆ.

ನಾವು ಮಾನವೀಯತೆ ದೃಷ್ಟಿಯಲ್ಲಿ ನೋಡಿ ಎಂದು ಹೇಳುತ್ತಿಲ್ಲ. ನಮ್ಮ ಸಾಂವಿಧಾನಿಕ ಹಕ್ಕು, ಗೌರವಯುತ ಜೀವನ, ಉದ್ಯೋಗ ಹಾಗೂ ಭದ್ರತೆಯನ್ನು ಬಯಸುತ್ತೇವೆ ಎಂದು ಸಂಘದ ಮುಖ್ಯಸ್ಥೆ ಮೇಘಾ ಮಲ್ನಾಡ್ ಹೇಳಿದ್ದಾರೆ.

ನಮಗಾಗಿ ಆಶ್ರಯ ತಾಣಗಳು, ಹಾಸ್ಟೆಲ್‌ಗಳು, ಮನೆಗಳು, ಕೃಷಿ ಭೂಮಿ, ರೂ.2 ಲಕ್ಷ ಸಬ್ಸಿಡಿ, ಬಡ್ಡಿ ರಹಿತ ಸಾಲ, ಪಿಂಚಣಿ ಹಣ ರೂ.2000ಕ್ಕೆ ಏರಿಕೆ ಹಾಗೂ ವೃದ್ಧಾಪ್ಯ ಪಿಂಚಣಿ ರೂ.5,000ಕ್ಕೆ ಹೆಚ್ಚಿಸುವಂತೆ, ಸರ್ಕಾರಿ ಉದ್ಯೋಗಗಳಲ್ಲಿ ಶೇ.1ರಷ್ಟು ಮೀಸಲಾತಿ ಮತ್ತು ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಲಿಂಗ ದೃಢೀಕರಣ ಶಸ್ತ್ರಚಿಕಿತ್ಸೆ ನೀಡಬೇಕು ಎಂಬುದು ಸಂಘದ ಪ್ರಮುಖ ಬೇಡಿಕೆಗಳಾಗಿವೆ.

# ಪತ್ರಕರ್ತರಿಗೆ ಹೊಣೆಗಾರಿಕೆ ಮುಖ್ಯ: ಸಚಿವ

■ ರಾಜಯೋಗ, ತುಮಕೂರು



ಪತ್ರಕರ್ತರು ಸಮಾಜದಲ್ಲಿ ಹೊಣೆಗಾರಿಕೆಯಿಂದ ನಡೆದುಕೊಳ್ಳಬೇಕು. ಸತ್ಯವನ್ನು ಎಂದೂ ಮರೆಮಾಚಬಾರದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಜಿ.ಪರಮೇಶ್ವರ ಇಲ್ಲಿ ಬುಧವಾರ ಸಲಹೆ ನೀಡಿದರು.

ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕ ಹಮ್ಮಿಕೊಂಡಿದ್ದ 'ಅಕ್ಷರ ನಿಧಿ' ಪ್ರತಿಭಾ ಪುರಸ್ಕಾರ ಮತ್ತು ಜಿ.ಪರಮೇಶ್ವರ–ಕನ್ನಿಕಾ ಪರಮೇಶ್ವರಿ ಪ್ರತಿಭಾ ಪುರಸ್ಕಾರ ನಿಧಿ ವಿತರಣಾ ಸಮಾರಂಭದಲ್ಲಿ ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ವಿತರಿಸಿ ಮಾತನಾಡಿದರು.

ರಾಜಕಾರಣಿಗಳು ಐದು ವರ್ಷ ಏನು ಕೆಲಸ ಮಾಡಿದ್ದಾರೆ ಎಂಬುದನ್ನು ಚುನಾವಣೆ ಸಮಯದಲ್ಲಿ ಅಳತೆ ಮಾಡುತ್ತಾರೆ. ಅಧಿಕಾರಿಗಳನ್ನೂ ಮತ್ತೊಂದು ರೀತಿಯಲ್ಲಿ ಅಳತೆ ಮಾಡಲಾಗುತ್ತದೆ. ಅದೇ ರೀತಿ ಪತ್ರಕರ್ತರಾದವರು ಸಮಾಜಕ್ಕೆ ಹೊಣೆಗಾರರಾಗಿರಬೇಕು. ಜನರ ನಂಬಿಕೆ ಉಳಿಸಿಕೊಳ್ಳಬೇಕು ಎಂದು ಹೇಳಿದರು. ವದಂತಿ, ಸುಳ್ಳು ಸುದ್ದಿ ಹಬ್ಬಿಸುವವರ ವಿರುದ್ಧ ಕ್ರಮ ಕೈಗೊಳ್ಳುವ ಸಲುವಾಗಿ ಶೀಘ್ರವೇ ಕಾಯ್ದೆಯೊಂದನ್ನು ಜಾರಿಗೆ ತರಲಾಗುವುದು. ಪರಿಶೀಲಿಸದೆ, ಖಚಿತಪಡಿಸಿಕೊಳ್ಳದೆ ಸುದ್ದಿ ಪ್ರಕಟಿಸಬಾರದು. ಎಲ್ಲಕ್ಕೂ ವಿಶ್ವಾಸಾರ್ಹತೆ ಮುಖ್ಯವಾಗುತ್ತದೆ. ವ್ಯಕ್ತಿ ಗೌರವ, ಖಾಸಗಿತನ ಕಾಪಾಡಬೇಕು. ಬರಹಗಳು ಸಮಾಜದಲ್ಲಿ ದ್ವೇಷ ಸೃಷ್ಟಿಸಬಾರದು ಎಂದರು. ಪತ್ರಕರ್ತರಿಗೆ ನಿವೇಶನ ಕೊಡಿಸಲು ಅಗತ್ಯ ಕ್ರಮ ತೆಗೆದುಕೊಳ್ಳಲಾಗಿದೆ. ಸಿದ್ಧಾರ್ಥ ಆಸ್ಪತ್ರೆಯಲ್ಲಿ ಉಚಿತ ಚಿಕಿತ್ಸೆ ಸಿಗುವಂತೆ ಮಾಡಲು ಆರೋಗ್ಯ ಕಾರ್ಡ್ ನೀಡಲಾಗುವುದು ಎಂದು ಭರವಸೆ ನೀಡಿ–ದರು. ಸಂಘದ ಅಧ್ಯಕ್ಷ ಎಲ್.ಯೋಗೇಶ್, 'ಶಿಕ್ಷಣ ಸಂಸ್ಥೆಗಳಲ್ಲಿ ರಿಯಾಯಿತಿ ದರದಲ್ಲಿ ಪತ್ರಕರ್ತರ ಮಕ್ಕಳಿಗೆ ಪ್ರವೇಶ ಕೊಡಿಸುವ ಪ್ರಯತ್ನ ನಡೆದಿದೆ' ಎಂದು ಹೇಳಿದರು.ಶಾಸಕರಾದ ಬಿ.ಸುರೇಶ್‌ಗೌಡ, ಜಿ.ಬಿ. ಜ್ಯೋತಿಗಣೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್ ಉಪಸ್ಥಿತರಿದ್ದರು.

# 26ನೇ ವಯಸ್ಸಿಗೆ ನ್ಯಾಯಾಧೀಶರಾದ ಲಕ್ಷ್ಮೀಶ

■ ರಾಜಯೋಗ, ಕೊರಟಗೆರೆ



ಪಟ್ಟಣದ ನಾಲ್ಕನೇ ವಾರ್ಡ್‌ನ ಬಡ ಕುಟುಂಬದ ಕೆ.ಎಸ್. ಲಕ್ಷ್ಮೀಶ 26ನೇ ವಯಸ್ಸಿನಲ್ಲೇ ಸಿವಿಲ್ ನ್ಯಾಯಾಧೀಶರಾಗಿದ್ದಾರೆ.

ಯಶೋದಮ್ಮ ಮತ್ತು ಶ್ರೀನಿವಾಸ ದಂಪತಿ ಪುತ್ರ ಕೆ.ಎಸ್. ಲಕ್ಷ್ಮೀಶ 25ನೇ ರ‍್ಯಾಂಕ್ ಪಡೆದು ನ್ಯಾಯಾಧೀಶರಾಗಿ ಆಯ್ಕೆಯಾಗಿದ್ದಾರೆ.

ಲಕ್ಷ್ಮೀಶ ಅವರ ತಾಯಿ ಬೀಡಿ ಸುತ್ತುವ ಕೆಲಸ ಮಾಡಿದರೆ, ತಂದೆ ಇರುವ ಅಲ್ಪ ಜಮೀನಿನಲ್ಲಿ ಕೃಷಿ ಹಾಗೂ ಕೂಲಿ ಕೆಲಸ ಮಾಡುತ್ತಿದ್ದಾರೆ. ಬಿಡುವಿನ ವೇಳೆಯಲ್ಲಿ ಸಂತೆಗಳಲ್ಲಿ ತರಕಾರಿ ಮಾರಾಟ ಮಾಡಿ ಬದುಕು ಸಾಗಿಸುತ್ತಿದ್ದಾರೆ. ಲಕ್ಷ್ಮೀಶ ಶಾಲಾ ದಿನಗಳಲ್ಲೇ ಅಮ್ಮನ ಜೊತೆ ಬೀಡಿ ಸುತ್ತುವುದು, ಪೊಟ್ಟಣ ಕಟ್ಟುವುದು, ಅಪ್ಪನೊಂದಿಗೆ ಹೊಲದಲ್ಲಿ ಕೃಷಿ ಚಟುವಟಿಕೆಗಳಿಗೆ ಕೈಜೋಡಿಸುವುದು ಹಾಗೂ ಸಂತೆ ದಿನಗಳಲ್ಲಿ ತರಕಾರಿ ಮೂಟೆ ಹೊತ್ತು ವ್ಯಾಪಾರದಲ್ಲಿ ಸಹಾಯ ಮಾಡುತ್ತಿದ್ದರು.

ವಿಜ್ಞಾನದಿಂದ ಕಾನೂನಿಗೆ: ಪಟ್ಟಣದಲ್ಲೇ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮುಗಿಸಿದ ಅವರು ತುಮಕೂರಿನಲ್ಲಿ ಪದವಿ ವಿಜ್ಞಾನ ಶಿಕ್ಷಣಕ್ಕೆ ಸೇರ್ಪಡೆಯಾದರು. ಆದರೆ ಕೋವಿಡ್ ಸಂದರ್ಭದಲ್ಲಿ ಮನೆಯಲ್ಲಿ ಆರ್ಥಿಕ ಸಂಕಷ್ಟ ಎದುರಾದಾಗ ವಿದ್ಯಾಭ್ಯಾಸವನ್ನು ತಾತ್ಕಾಲಿಕವಾಗಿ ನಿಲ್ಲಿಸಿ ಬೆಂಗಳೂರಿನಲ್ಲಿ ಮಾರ್ಷಲ್ ಕೆಲಸಕ್ಕೆ ಸೇರಿದರು. ನಾಲ್ಕು ತಿಂಗಳ ಬಳಿಕ ಎಲ್‌ಎಲ್‌ಬಿ ಪದವಿಗೆ ಸೇರ್ಪಡೆಗೊಂಡರು. ಸ್ನಾತಕೋತ್ತರ ಕಾನೂನು ಪದವಿ ಓದುತ್ತಿದ್ದ ವೇಳೆಯೇ ನ್ಯಾಯಾಧೀಶ ಹುದ್ದೆಯ ಪರೀಕ್ಷೆ ಬರೆದು 25ನೇ ರ‍್ಯಾಂಕ್ ಪಡೆದಿದ್ದಾರೆ.

'ನ್ಯಾಯಾಧೀಶ ಎಚ್.ಆರ್. ರವಿಕುಮಾರ್ ಮಾರ್ಗದರ್ಶನ ಹಾಗೂ ಆಲ್ ಇಂಡಿಯಾ ಲಾಯರ್ಸ್ ಅಸೋಸಿಯೇಷನ್ ನೀಡಿದ ಕೋಚಿಂಗ್ ನೆರವಾಯಿತು' ಎನ್ನುತ್ತಾರೆ ಲಕ್ಷ್ಮೀಶ.

# ಬೆಂಗಳೂರು ಟ್ರಾಫಿಕ್ ಸಮಸ್ಯೆ! ತ್ವರಿತ ಕ್ರಮಕ್ಕೆ ಹೈಕೋರ್ಟ್ ಸೂಚನೆ

■ ರಾಜಯೋಗ

ಬೆಂಗಳೂರು ಜನರ ಬಹುದೊಡ್ಡ ಸಮಸ್ಯೆ ಟ್ರಾಫಿಕ್ ಜಾಮ್‌ಗೆ ಸಂಬಂಧಿಸಿದಂತೆ ಅಗತ್ಯ ಕ್ರಮ ಕೈಗೊಳ್ಳಿ ಎಂದು ಕರ್ನಾಟಕ ಹೈ ಕೋರ್ಟ್ ಸೂಚನೆ ನೀಡಿದೆ.

ವಕೀಲ ಎ.ವಿ. ಅಮರನಾಥನ್ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಹೈಕೋರ್ಟ್ ಬುಧವಾರ ವಜಾಗೊಳಿಸಿದೆ. ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಸಿ.ಎಂ. ಪೂಣಚ್ಚ ಅವರಿದ್ದ ವಿಭಾಗೀಯ ಪೀಠ ಈ ಅರ್ಜಿಯನ್ನು ವಜಾಗೊಳಿಸಿದೆ.

ಟ್ರಾಫಿಕ್ ಸಮಸ್ಯೆಯನ್ನು ಕಾರ್ಯನಿರ್ವಾಹಕ ಅಧಿಕಾರಿಗಳೇ ಪರಿಹರಿಸಬೇಕಾದ ವಿಷಯವಾಗಿದ್ದು, ಈ ಕುರಿತು ಸಂಬಂಧಿಸಿದ ಇಲಾಖೆಗಳು ಕ್ರಮ ಕೈಗೊಳ್ಳಬೇಕೆಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ವಿಚಾರಣೆ ವೇಳೆ ಅರ್ಜಿದಾರರು ಖುದ್ದು ವಾದ ಮಂಡಿಸಿ, ಬೆಂಗಳೂರು ವಿಶ್ವದಲ್ಲೇ–2ನೇ ಸಂಚಾರ ದಟ್ಟಣೆ–ಯ ನಗರವಾಗಿದ್ದು, ಜನರು ದಿನನಿತ್ಯ ಪರದಾಡುತ್ತಿದ್ದಾರೆ. ಸಂಚಾರ ದಟ್ಟಣೆ ಕುರಿತಂತೆ ತಮ್ಮ ಮಕ್ಕಳೂ ದೂರಿದ್ದಾರೆ–ಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಆದ್ದರಿಂದ ಈ ಸಂಚಾರ ದಟ್ಟಣೆ ಪರಿಹಾರಕ್ಕೆ ಹೈಕೋರ್ಟ್ ಉಸ್ತುವಾರಿಯಲ್ಲಿ ತಜ್ಞರ ಸಮಿತಿ ರಚನೆ ಮಾಡಬೇಕು ಎಂದು ನ್ಯಾಯಪೀಠವನ್ನು ಕೋರಿದರು.

# ತಿರುಮಲದಲ್ಲಿ ಸ್ಮಾರ್ಟ್ ಪಾದರಕ್ಷೆ ವ್ಯವಸ್ಥೆ: ಭಕ್ತರ ಗೊಂದಲಕ್ಕೆ 'ಡಿಜಿಟಲ್ ಪರಿಹಾರ'!

ತಿರುಮಲದಲ್ಲಿ ದಿನದಿಂದ ದಿನಕ್ಕೆ ಭಕ್ತರ ಸಂಖ್ಯೆ ಹೆಚ್ಚುತ್ತಿರುವ ಹಿನ್ನಲೆಯಲ್ಲಿ, ದರ್ಶನ ವ್ಯವಸ್ಥೆಯನ್ನು ಸುಗಮಗೊಳಿಸಲು ಟಿಟಿಡಿ ಮಹತ್ವದ ಹೆಜ್ಜೆ ಇಟ್ಟಿದೆ. ವಿಶೇಷವಾಗಿ ಪಾದರಕ್ಷೆ ಇಡುವ ವಿಚಾರದಲ್ಲಿ ಉಂಟಾಗುತ್ತಿದ್ದ ಗೊಂದಲಕ್ಕೆ ಇದೀಗ ಡಿಜಿಟಲ್ ಪರಿಹಾರ ಒದಗಿಸಲಾಗಿದೆ.ಹಿಂದೆ ಅನೇಕರು ಪಾದರಕ್ಷೆಗಳನ್ನು ರಸ್ತೆ ಬದಿಯಲ್ಲಿ ಅಥವಾ ಅನಿಯೋಜಿತ ಸ್ಥಳಗಳಲ್ಲಿ ಬಿಡುತ್ತಿದ್ದರಿಂದ ಅವು ಕಾಣೆಯಾಗುವ ಘಟನೆಗಳು ಸಂಭವಿಸುತ್ತಿದ್ದವು. ವಿಶೇಷ ಕೌಂಟರ್‌ಗಳಿದ್ದರೂ ಜನಸಂದಣಿ ಹೆಚ್ಚಿರುವುದರಿಂದ ಠೇವಣಿ ಹಾಗೂ ವಾಪಸು ಪಡೆಯಲು ವಿಳಂಬವಾಗುತ್ತಿತ್ತು.ಈ ಹಿನ್ನಲೆಯಲ್ಲಿ ಟಿಟಿಡಿ ಕ್ಯೂಆರ್ ಕೋಡ್ ರಸೀದಿ ವ್ಯವಸ್ಥೆಯನ್ನು ಪರಿಚಯಿಸಿದೆ. ಭಕ್ತರು ಪಾದರಕ್ಷೆಗಳನ್ನು ಕೌಂಟರ್‌ನಲ್ಲಿ ನೀಡಿದ ಬಳಿಕ ಕ್ಯೂಆರ್ ರಸೀದಿ ಪಡೆಯುತ್ತಾರೆ. ಮರಳಿ ಪಡೆಯುವಾಗ ಅದನ್ನು ಸ್ಕ್ಯಾನ್ ಮಾಡಿದರೆ ಪಾದರಕ್ಷೆಗಳು ತ್ವರಿತವಾಗಿ ಲಭ್ಯವಾಗುತ್ತವೆ. ಇದರಿಂದ ಸಮಯ ಉಳಿತಾಯವಾಗುವುದರ ಜೊತೆಗೆ ವ್ಯವಸ್ಥಿತ ನಿರ್ವಹಣೆ ಸಾಧ್ಯವಾಗಿದೆ.

# ಡೇರಿ ಕಾರ್ಯದರ್ಶಿ ಕಾರ್ಯವೈಖರಿಗೆ ಖಂಡನೆ

## ರಸ್ತೆಗೆ ಹಾಲು ಸುರಿದು ರೈತರ ಪ್ರತಿಭಟನೆ

■ ರಾಜಯೋಗ, ಪಾಂಡವಪುರ



ತಾಲ್ಲೂಕಿನ ಮಾಡರಹಳ್ಳಿ ಗ್ರಾಮದ ಡೇರಿ ಕಾರ್ಯದರ್ಶಿ ಹಾಗೂ ಸೂಪರ್ ವೈಸರ್ ವರ್ತನೆ ಖಂಡಿಸಿ ರೈತರು ಮತ್ತು ಮಹಿಳೆಯರು ಬುಧವಾರ ರಸ್ತೆಗೆ ಹಾಲು ಸುರಿದು ಪ್ರತಿಭಟನೆ ನಡೆಸಿದರು. ಗ್ರಾಮದ ರಸ್ತೆಯಲ್ಲಿ ಜಮಾಯಿಸಿದ ರೈತರು ಡೇರಿ ಕಾರ್ಯುದರ್ಶಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಹಾಲು ಸರಬರಾಜು ಮಾಡಲು ಬಂದ ರೈತರಿಂದ ಸರಿಯಾಗಿ ಹಾಲು ಪರೀಕ್ಷೆ ನಡೆಸದೆ, ಗುಣಮಟ್ಟವಿಲ್ಲ ಎಂದು ಹಾಲನ್ನು ವಾಪಸ್ ಕಳುಹಿಸಿದ್ದಾರೆ. ಇದನ್ನು ಪ್ರಶ್ನಿಸುವ ಮಹಿಳೆಯರ ವಿರುದ್ಧ ದುರ್ನಡೆಯಿಂದ ನಡೆದುಕೊಳ್ಳುತ್ತಾರೆ. ಪುರುಷರು ಪ್ರಶ್ನೆ ಮಾಡಿದರೆ ಅವರ ವಿರುದ್ಧ ಪ್ರಕರಣ ದಾಖಲಿಸುತ್ತಾರೆ ಎಂದು ಆರೋಪಿಸಿದರು.

ಕಳೆದೆರಡು ದಿನಗಳಿಂದ ಹಾಲು ಸರಬರಾಜು ಮಾಡದ ಕಾರಣ ಸುಮಾರು 960 ಲೀಟರ್ ಹಾಲು ನಷ್ಟವಾಗಿದೆ. ರೈತರಿಗೆ ಹಾಲಿನ ನಷ್ಟವನ್ನು ಅಧಿಕಾರಿಗಳು ಭರಿಸಬೇಕು ಎಂದು ಪಟ್ಟುಹಿಡಿದರು.

'ಡೇರಿ ಪ್ರಾರಂಭಗೊಂಡ 15 ವರ್ಷಗಳಿಂದಲೂ ಒಮ್ಮೆ ಹೊರತುಪಡಿಸಿದರೆ ಎಂದಿಗೂ ಚುನಾವಣೆ ನಡೆಸಿಲ್ಲ. ಡೇರಿ ಷೇರುದಾರರಿಗೆ ಯಾವುದೇ ಪ್ರೋತ್ಸಾಹ ಧನ ನೀಡಿಲ್ಲ. ಜತೆಗೆ ಬೋನಸ್ ಹಣವನ್ನೂ ಸರಿಯಾಗಿ ಪಾವತಿಸಿಲ್ಲ. ಗಲಾಟೆ ಮಾಡಿದಾಗ ಕೇವಲ 4 ವರ್ಷದ ಬೋನಸ್ ಹಣ ನೀಡಿದ್ದಾರೆ. ರಾಷ್ಟ್ರೀಯ ಹಬ್ಬಗಳಿಗೆ ಡೇರಿಯಿಂದ ಶಾಲೆಗಳಿಗೆ ಹಣ ನೀಡುವುದಿಲ್ಲ. ಬೋನಸ್ ಹಣ ಏನಾಗಿದೆ ಎಂಬುದು ಗೊತ್ತಾಗಿಲ್ಲ' ಎಂದು ದೂರಿದರು.

'ಡೇರಿ ಕಾರ್ಯದರ್ಶಿ ಚಿಕ್ಕ ತಾಯಮ್ಮ ಅವರು ತಮಗಿಷ್ಟ ಬಂದವರನ್ನು ನಿರ್ದೇಶಕರನ್ನಾಗಿ ಸ್ವಯಂ ಆಯ್ಕೆ ಮಾಡಿಕೊಂಡು ಸರ್ವಾಧಿಕಾರ ಧೋರಣೆ ಅನುಸರಿಸುತ್ತಿದ್ದಾರೆ. ನೆಪ ಮಾತ್ರಕ್ಕೆ ಈಗ ಮಾರ್ಚ್ 1ಕ್ಕೆ ಚುನಾವಣೆ ಘೋಷಿಸಿದ್ದಾರೆ. ಗಲಾಟೆ ಎಬ್ಬಿಸಿ ಡೇರಿಯನ್ನು ಸೂಪರ್ ಸೀಡ್ ಮಾಡಿಸಿ ನಂತರ ಇವರಿಗೆ ಇಷ್ಟ ಬಂದವರನ್ನು ಆಯ್ಕೆ ಮಾಡಿಕೊಳ್ಳುವ ಹುನ್ನಾರ ನಡೆಸಿದ್ದಾರೆ. ಹೀಗಾಗಿ ಚುನಾವಣೆ ಮುಂದೂಡಬೇಕು' ಎಂದು ಆಗ್ರಹಿಸಿದ ಪ್ರತಿಭಟನಾಕಾರರು, ಸರಬರಾಜು ಮಾಡಿದ ಹಣವನ್ನು ಕಾಲ ಕಾಲಕ್ಕೆ ಬಟವಾಡೆ ಮಾಡುವುದಿಲ್ಲ ಎಂದು ಡೇರಿ ಕಾರ್ಯದರ್ಶಿ ಚಿಕ್ಕತಾಯಮ್ಮ ಮತ್ತು ಸೂಪರ್ ವೈಸರ್ ಉಷಾ ವಿರುದ್ಧ ಹರಿಹಾಯ್ದರು.

ಡೇರಿಯ ಸಮಸ್ಯೆಯನ್ನು ಬಗೆಹರಿಸದಿದ್ದರೆ ಜಾನುವಾರುಗಳೊಂದಿಗೆ ಪಾಂಡವಪುರ ಮನ್‌ಮುಲ್ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಮುಖಂಡರಾದ ಚಲುವೇಗೌಡ, ನಾರಾಯಣಗೌಡ, ಶೇಖರ್, ಶಂಕರೇಗೌಡ, ಯೋಗಣ್ಣ, ಆನಂದ, ರಾಜಮ್ಮ, ವಿಜಯಮ್ಮ, ಲಕ್ಷ್ಮಮ್ಮ, ನಿಂಗಮ್ಮ, ಯಜಮಾನರಾದ ವೆಂಕಟೇಗೌಡ, ಮಂಜು, ಎಂ.ಎಸ್.ಜವರೇಗೌಡ ಇತರರು ಭಾಗವಹಿಸಿದ್ದರು.

# ಜೀತ ಪದ್ಧತಿ ಆಚರಿಸುವವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ

### ಹೆಚ್ಚಿನ ಜನರು ವಿದ್ಯಾಭ್ಯಾಸ ಪಡೆದಂತೆ ಜೀತ ಪದ್ಧತಿ ಪ್ರಮಾಣ ಕುಸಿಯುತ್ತಿದೆ



■ ರಾಜಯೋಗ, ಮಂಡ್ಯ

ಹಳ್ಳಿಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು ವಿದ್ಯಾಭ್ಯಾಸ ಪಡೆದಂತೆ ಜೀತ ಪದ್ಧತಿ ಕುಸಿಯುತ್ತಿದೆ ಎಂದು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಜೆ.ಎನ್ ಸುಬ್ರಹ್ಮಣ್ಯ ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಜೀತ ಪದ್ಧತಿ ರದ್ದತಿ ಕಾಯ್ದೆ 1976ರ ಕುರಿತು ಆಯೋಜಿಸಲಾಗಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಎಲ್ಲಿ ಬರಗಾಲ, ಪ್ರವಾಹ ಉಂಟಾಗುತ್ತದೆ ಅಲ್ಲಿ ಆಹಾರದ ಸಮಸ್ಯೆಯಿಂದ ಹಾಗೂ ಖಾಸಗಿ ಲೇವಾದೇವಿ ವ್ಯವಹಾರ ಮಾಡುವ ಪ್ರದೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜೀತ ಪದ್ಧತಿ ಜಾರಿಯಲ್ಲಿದೆ. ಇವತ್ತಿಗೂ ಜೀತ ಪದ್ಧತಿ ಜೀವಂತವಾಗಿ ಇರುವುದು ನಮ್ಮ ಗಮನಕ್ಕೆ ಬಂದಿದೆ ಎಂದರು.

ದೇಶದಲ್ಲಿ ಜೀತ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸರ್ಕಾರದ ಪ್ರತಿಯೊಂದು ಅಂಗಗಳು ಕ್ರಮ ಕೈಗೊಳ್ಳಬೇಕು. ಜೀತ ಪದ್ಧತಿ ಮನಸ್ಥಿತಿ ಮತ್ತು ಜೀತ ಪದ್ಧತಿಯನ್ನು ಆಚರಿಸುತ್ತಿರುವವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಿ ಕೃಷ್ಣನ ಜನ್ಮ ಸ್ಥಳಕ್ಕೆ ಕಳುಹಿಸಿದರೆ ಉಳಿದವರಿಗೆ ಎಚ್ಚರಿಕೆ ನೀಡಿದಂತಾಗುತ್ತದೆ ಎಂದು ಹೇಳಿದರು.

ಜೀತ ಪದ್ಧತಿ ಆಚರಿಸುವವರು ಹಾಗೂ ಜೀತ ಪದ್ಧತಿಗೆ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷಕವಾಗಿ ಪ್ರಚೋದನೆ ನೀಡುವವರ ವಿರುದ್ಧ ಯಾವುದೇ ರೀತಿಯ ದಯೆ ದಾಕ್ಷಿಣ್ಯ ಇಲ್ಲದೆ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸುವ ಮೂಲಕ ಜಾಗೃತಿ ಜೀತ ಪದ್ಧತಿ ನಿರ್ಮೂಲನೆಗೆ ಅರಿವು ಮೂಡಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧಿಕಾರಿ ಡಾ. ಕುಮಾರ ಅವರು ಜೀತ ಪದ್ಧತಿ ನಿರ್ಮೂಲನೆ ಸಾಮಾಜಿಕ ಜವಾಬ್ದಾರಿಯಾಗಿದೆ ಈ ನಿಟ್ಟಿನಲ್ಲಿ ಎಲ್ಲರೂ ಜೀತ ಪದ್ಧತಿಯನ್ನು ನಿರ್ಮೂಲನೆ ಮಾಡಲು ಪಣ ತೊಡಬೇಕು. ಸ್ವಾತಂತ್ರ್ಯ ಬಂದ ನಂತರ ಭಾರತದಲ್ಲಿ ಅನಕ್ಷರತೆ, ಮೂಢನಂಬಿಕೆ, ಬಡತನ, ಮೌಢ್ಯತೆ ಭಾರತದಲ್ಲಿ ಹೆಚ್ಚಿತ್ತು, ಅಂತಹ ಸಂದರ್ಭದಲ್ಲಿ ಜೀತ ಪದ್ಧತಿಯೂ ಕೂಡ ಹೆಚ್ಚಿತ್ತು ಆದರೆ ಇಂದು ದೇಶದಲ್ಲಿ ಸಾಕ್ಷರತೆ ಹೆಚ್ಚಿದರೂ ಸಹ ಭಾರತದಿಂದ ಜೀತ ಪದ್ಧತಿ ನಿರ್ಮೂಲನೆಯಾಗಿಲ್ಲ ಇದು ನಾಗರೀಕ ಸಮಾಜ ತಲೆತಗ್ಗಿಸುವ ಸಂಗಾತಿಯಾಗಿದೆ ಎಂದು ಹೇಳಿದರು.

ಮನುಷ್ಯನಿಂದ ಮನುಷ್ಯ ಅವನ ಇಚ್ಛೆಗೆ ಅನುಸಾರ ಶೋಷಣೆಯಿಂದ ಕಾರ್ಯ ಮಾಡಿಸಿಕೊಳ್ಳುವುದು ಕಾನೂನು ಬಾಹಿರ ಹಾಗೂ ಅಮಾನವೀಯ ಕೃತ್ಯವಾಗಿದೆ. ಜೀತ ಪದ್ಧತಿಗೆ ಪ್ರಮುಖ ಕಾರಣವೆಂದರೆ ನಮ್ಮಲ್ಲಿರುವ ಸಾಮಾಜಿಕ ಮತ್ತು ಆರ್ಥಿಕ ಅಸಮಾನತೆ ಎಂದು ಹೇಳಿದರು.

ಕಳೆದ ಒಂದು ವರ್ಷದಿಂದ ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಣ ಅಧಿಕಾರಿಗಳು ಜಿಲ್ಲೆಯನ್ನು ಜೀತ ವಿಮುಕ್ತಿ ಗೊಳಿಸಲು ಶ್ರಮ ವಹಿಸಿದ್ದಾರೆ. ಜೀತ ಪದ್ಧತಿಗೆ ಒಳಗಾದವರನ್ನು ಗುರುತಿಸಿ ಅವರಿಗೆ ವಿಶೇಷ ಗುರುತಿನ ಚೀಟಿ ನೀಡಿ ವಿವಿಧ ಸರ್ಕಾರಿ ಸೌಲಭ್ಯಗಳನ್ನು ತಲುಪಿಸುವ ಕಾರ್ಯವನ್ನು ಹಮ್ಮಿಕೊಂಡು ಬರುತ್ತಿದ್ದಾರೆ ಎಂದು ಹೇಳಿದರು.

ಜೀತ ಪದ್ಧತಿಗೆ ಪರೋಕ್ಷವಾಗಿ ಪ್ರಚೋದನೆ ನೀಡುವವರ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳಬೇಕು. ಜೀತ ಪದ್ಧತಿಯ ಕುರಿತು ಅರಿವು ಮೂಡಿಸಬೇಕು. ಒಬ್ಬ ವ್ಯಕ್ತಿಯ ಬಡತನ, ಅನಕ್ಷರತೆ ಇನ್ನೊಬ್ಬರಿಗೆ ಬಂಡವಾಳ ಆಗಬಾರದು. ಸ್ವಾತಂತ್ರ್ಯದ ನಂತರ ಬಂದ ಸರ್ಕಾರಗಳು ದೇಶದ ಜನರನ್ನು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಅಭಿವೃದ್ಧಿ ಪಡಿಸಲು ಅನೇಕ ಯೋಜನೆಗಳನ್ನು ರೂಪಿಸಿದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಆರ್. ನಂದಿನಿ ಅವರು ಮಾತನಾಡಿ ಜೀತ ಪದ್ಧತಿಗೆ ಒಳಗಾದವರಿಗೆ ಹೇಗೆ ನೆರವು ನೀಡಬಹುದು, ಸಮಾಜದ ಮುಖ್ಯವಾಹಿನಿಗೆ ತರಬೇಕು ಹಾಗೂ ಆರ್ಥಿಕವಾಗಿ ಸ್ವಾವಲಂಬಿಗಳಾಗಿ ಮಾಡಬೇಕೆಂದರೆ ಮೊದಲು ಅವರಿಗೆ ಅರಿವು ಮೂಡಿಸುವ ಕೆಲಸವಾಗಬೇಕು.

ಜಿಲ್ಲೆಯ ಎಲ್ಲಾ ಇಲಾಖೆಗಳ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಿ ಜಿಲ್ಲೆಯಲ್ಲಿ ಜೀತ ಪದ್ಧತಿಗೆ ಒಳಗಾದ 84 ಜನರಿಗೆ ಸರ್ಕಾರಿ ಸೌಲಭ್ಯಗಳನ್ನು ತಲುಪಿಸಲು ಸಹಕಾರಿಸಿದರಿಂದ "ನನ್ನ ಗುರುತು" ಯೋಜನೆ ಯಶಸ್ವಿಯಾಗಿದೆ ಎಂದು ಹೇಳಿದರು.

ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಇಲಾಖೆಯಿಂದ ಜೀತ ವಿಮುಕ್ತಿ ಹೊಂದಿದ ವ್ಯಕ್ತಿಗೆ ಸ್ವಾವಲಂಬಿ ಸಾರಥಿ ಯೋಜನೆಯಡಿ ಕಾರ್ ನೀಡಿ ಅವರ ಬದುಕಿಗೆ ನೆರವಾಗಿದೆ. ಅಧಿಕಾರಿಗಳು ಜೀತ ವಿಮುಕ್ತರಿಗೆ ಮಾನವ ನೆಲೆಯಿಂದ ಸ್ಪಂದಿಸಬೇಕು. ಜೀತ ಪದ್ಧತಿಯಿಂದ ವಿಮುಕ್ತಿಗೊಳಿಸುವದರ ಜೊತೆಗೆ ಜೀತ ಪದ್ಧತಿ ಮನಸ್ಥಿತಿಯನ್ನು ಹೋಗಲಾಡಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಆನಂದ್ ಎಂ, ಸಮಾಲೋಚನ ಮನಶಾಸ್ತ್ರ ತಜ್ಞರಾದ ಪ್ರಥಮ್ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

# 5 ವರ್ಷದ ಶಾಶ್ವತ ಕರಡು ಯೋಜನೆ ಸಿದ್ಧಪಡಿಸಿ: ಅಧಿಕಾರಿಗಳಿಗೆ ಶರತ್ ಬಚ್ಚೇಗೌಡ ಸೂಚನೆ

■ ರಾಜಯೋಗ, ಹೊಸಕೋಟೆ



ಮುಂದಿನ ಎರಡು ವರ್ಷಗಳ ನೀಲ ನಕ್ಷೆಗೆ ಬದಲಿಯಾಗಿ ಐದು ವರ್ಷಕ್ಕೂ ಮೀರಿ ನಗರ ಹಾಗೂ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸಾರ್ವಜನಿಕರ ಮೂಲ ಸೌಕರ್ಯಕ್ಕೆ ಬೇಕಾದ ಕರಡು ಅಭಿವೃದ್ಧಿ ಯೋಜನೆಯಡಿ ಬೇಡಿಕೆ ಪಟ್ಟಿ ಸಿದ್ದಪಡಿಸಬೇಕೆಂದು ವಿವಿಧ ಇಲಾಖೆಗಳಿಗೆ ಶಾಸಕ ಶರತ್ ಬಚ್ಚೇಗೌಡ ಸೂಚಿಸಿದರು.

ನಗರದ ತಾಲ್ಲೂಕು ಪಂಚಾಯತಿ ಸಭಾಂಗಣದಲ್ಲಿ ಸರ್ಕಾರಿ ಇಲಾಖೆಗಳ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳೊಂದಿಗೆ ನಡೆದ ಕರಡು ಅಭಿವೃದ್ಧಿ ಯೋಜನೆಗಳ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು.

ವೇಗವಾಗಿ ಬೆಳೆಯುತ್ತಿರುವ ತಾಲ್ಲೂಕನ್ನು ಮಾದರಿಯಾಗಿಸುವ ಆಶಯವಿದೆ. ಆದ್ದರಿಂದ ಪಂಚಾಯಿತಿಗಳು ಕೇವಲ ನೀರು, ಮೋರಿ, ರಸ್ತೆ, ಬೀದಿ ದೀಪಗಳಂತಹ ಮೂಲ ಸೌಕರ್ಯ ಕಲ್ಪಿಸಬೇಕು. ಶಾಶ್ವತ ಅಭಿವೃದ್ಧಿಯತ್ತ ಗಮನ ಹರಿಸಬೇಕೆಂದು ನಿರ್ದೇಶಿಸಿದರು.

ಕುಸುಮ್ ಯೋಜನೆಯಡಿ ಎಲ್ಲಾ ಸರ್ಕಾರಿ ಕಚೇರಿ, ಶಾಲಾ-ಕಾಲೇಜು, ಸರ್ಕಾರಿ ಗೋಮಾಳ, ಕೆರೆಯಂಗಳ ಮೊದಲಾದೆಡೆ ಸೋಲಾರ್ ವಿದ್ಯುತ್ ಉತ್ಪಾದನೆಗೆ ಉತ್ತೇಜನೆ, ಮಳೆ ನೀರು ಸಂಗ್ರಹ, ನಗರದ ವ್ಯಾಪ್ತಿಯಲ್ಲಿ 24 ಗಂಟೆ ವಿದ್ಯುತ್, ನಗರಕ್ಕೆ ಕಾವೇರಿ ನೀರು, ನೂತನ ಉದ್ಯಾನ ನಿರ್ಮಾಣ, ಸಮರ್ಪಕ ರೀತಿಯ ಬೀದಿ ದೀಪ ನಿರ್ವಹಣೆ, ನೈರ್ಮಲ್ಯ ಕಾಪಾಡುವುದು, ಕೃಷಿ ಸಂಬಂದ ಅಭಿವೃದ್ಧಿ ಕೆಲಸಗಳನ್ನು ಪಟ್ಟಿ ಮಾಡಬೇಕಿದೆ ಎಂದರು. ಹೆಚ್ಚುವರಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಪಶು ಆಸ್ಪತ್ರೆ, ರಾಸುಗಳ ಫಾರಂ ಸ್ಥಾಪನೆ, ಬ್ರೀಡಿಂಗ್ ಕೇಂದ್ರಗಳ ಬೇಡಿಕೆ, ಮ್ಯಾಗ್ನೆಟ್ ಶಾಲೆ ಸ್ಥಾಪನೆಗೆ ಬೇಕಾದ ಕೆಪಿಎಸ್ ಮಾನದಂಡ ಅಳವಡಿಕೆಗೆ ಸಂಪನ್ಮೂಲ ಕ್ರೂಡಿ-ಕರಣ, ಪ್ರಜಾ ಸೌಧ, ನಾಡಕಚೇರಿಗಳ ನಿರ್ಮಾಣ, ಹೀಗೆ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಮುಂದಿನ ಐದು ವರ್ಷಕ್ಕೂ ಮೀರಿ ತಾಲ್ಲೂಕಿಗೆ ಬೇಕಾಗುವ ಸೌಲಭ್ಯಗಳನ್ನು ಪ್ರತಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಿಂದ ಎಲ್ಲಾ ಸರ್ಕಾರಿ ಅಧಿಕಾರಿಗಳು ಕರಡು ಪ್ರತಿಯನ್ನು ತಯಾರಿಸಿ ಮುಂದಿನ ಸೋಮವಾರದೊಳಗೆ ಸಲ್ಲಿಸಬೇಕಿದೆ ಎಂದು ಸೂಚಿಸಿದರು.

ತಾಲ್ಲೂಕು ಪಂಚಾಯತಿ ಇಒ, ಮುನಿಯಪ್ಪ, ಸರ್ಕಾರಿ ಇಲಾಖೆಗಳ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳು ಹಾಜರಿದ್ದರು.

## ಅರ್ಜಿ ಅಹ್ವಾನ

■ ರಾಜಯೋಗ, ಮಂಡ್ಯ

ವಿಕಲಚೇತನರ ಗ್ರಾಮೀಣ ಪುನರ್ವಸತಿ ಯೋಜನೆಯಡಿ ನಾಗಮಂಗಲ ತಾಲ್ಲೂಕಿನ ಬೆಳ್ಳೂರು ಪಟ್ಟಣ ಪಂಚಾಯಿತಿಯಲ್ಲಿ ಖಾಲಿ ಇರುವ ನಗರ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಅರ್ಹ ಅಂಗವಿಕಲರನ್ನು ಮಾಸಿಕ ಗೌರವಧನ ಪಾವತಿ ಆಧಾರದ ಮೇಲೆ ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಎಸ್.ಎಸ್.ಎಲ್.ಸಿ. ಉತ್ತೀರ್ಣ/ ಅನುತ್ತೀರ್ಣರಾದ 18 ರಿಂದ 45 ವರ್ಷದೊಳಗಿನ ಬೆಳ್ಳೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ವಿಕಲಚೇತನರು ಮಾರ್ಚ್ 05 ರ ಒಳಗಾಗಿ ಭಾಗ್ಯಮ್ಮ ವಿವಿದ್ದೋದೇಶ ಪುನರ್ವಸತಿ ಕಾರ್ಯಕರ್ತರು (ಪ್ರಭಾರ), ತಾಲ್ಲೂಕು ಪಂಚಾಯಿತಿ, ನಾಗಮಂಗಲ ಇವರಿಂದ ಅರ್ಜಿ ನಮೂನೆ ಪಡೆದು ಅಗತ್ಯ ದಾಖಲೆಗಳೊಂದಿಗೆ ನಿಗಧಿತ ಅವಧಿಯೊಳಗೆ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂ. ಸಂ.7411254522/08232-239234) ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದಾರೆ.

## ಕಾಣೆಯಾದವರ ಪತ್ತೆಗಾಗಿ

■ ರಾಜಯೋಗ, ಮಂಡ್ಯ

ಮಂಡ್ಯ ತಾಲ್ಲೂಕಿನ ಮಂಗಲ ಗ್ರಾಮದ ಕುಮಾರ(41) ಎಂಬುವವರು ಕಾಣೆಯಾಗಿದ್ದಾರೆ ಎಂದು ಮಳವಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಕಾಣೆಯಾದ ವ್ಯಕ್ತಿಯು 5.5 ಅಡಿ ಎತ್ತರ, ಕೋಲು ಮುಖ, ಎಣ್ಣೆ ಗೋಧಿ ಮೈ ಬಣ್ಣ, ನೀಲಿ ಮತ್ತು ಬಿಳಿ ಬಣ್ಣದ ಶರ್ಟ್ ಮತ್ತು ನೀಲಿ ಬಣ್ಣದ ಪ್ಯಾಂಟ್ ಅನ್ನು ಧರಿಸಿರುತ್ತಾರೆ.

ವ್ಯಕ್ತಿಯ ಸುಳಿವು ಸಿಕ್ಕಲ್ಲಿ ದೂ.ಸಂ: 9686196846,8971014685 ಅನ್ನು ಸಂಪರ್ಕಿಸಬಹುದು ಎಂದು ಮಳವಳ್ಳಿ ಪೊಲೀಸ್ ಠಾಣೆಯ ಸಬ್ ಇನ್ಸ್ ಪೆಕ್ಟರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಯಲಾಟ ಕಲೆಗಿದೆ ಮಹತ್ವ: ಗುರುಕುಮಾರ್ ಪಾಟೀಲ್



**ಸೊರಬ:** 'ಹಿರಿಯರು ಪಾರಂಪರಿಕವಾಗಿ ಮತ್ತು ಸಾಂಸ್ಕೃತಿಕವಾಗಿ ನಮಗೆ ಬಳುವಳಿಯಾಗಿ ನೀಡಿದ ಬಯಲಾಟದ ಕಲೆಗೆ ಅಪಾರವಾದ ಮಹತ್ವವಿದೆ. ಇದು ನಮ್ಮ ಮಣ್ಣಿನ ಜೀವಂತ ಸಂಸ್ಕೃತಿಯಾಗಿದ್ದು, ಇದನ್ನು ಮುಂದಿನ ಪೀಳಿಗೆಗೆ ಪರಿಚಯಿಸಿ ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ' ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಗುರುಕುಮಾರ್ ಪಾಟೀಲ್ ಹೇಳಿದರು.

ತಾಲ್ಲೂಕಿನ ಹೊಳೆಮರೂರು ಗ್ರಾಮದಲ್ಲಿ ಗಜಾನನ ಯುವಕ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ಬಯಲಾಟದ ಸಭಾ ಕಾರ್ಯಕ್ರಮದಲ್ಲಿ ಮಾತನಾಡಿದರು.

'ಬಯಲಾಟ ಎಂಬುವುದು ಕೇವಲ ಒಂದು ಪ್ರದರ್ಶನವಲ್ಲ, ಅದು ಹತ್ತು ಹಲವಾರು ಕಲೆಗಳ ಸುಂದರ ಸಂಗಮವಾಗಿದೆ. ಸರ್ಕಾರವು ಜನಪದ ಕಲೆಗಳ ಅಭಿವೃದ್ಧಿಗಾಗಿ ಪ್ರತ್ಯೇಕ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಿ ಪ್ರೋತ್ಸಾಹ ನೀಡುತ್ತಿದೆ. ಮುಖ್ಯವಾಗಿ ಭಾಗವತರ ಮಾರ್ಗದರ್ಶನದಲ್ಲಿ ಕಲೆಗಳು ಅತ್ಯಂತ ಸುಂದರವಾಗಿ ಮೂಡಿಬರಲು ಸಾಧ್ಯ, ಪೌರಾಣಿಕ ಪಾತ್ರಗಳಿಗೆ ಕಲಾವಿದರು ಜೀವ ತುಂಬಿದಾಗ ನಮ್ಮ ಪರಂಪರೆಗೆ ಹೊಸ ಕಳೆ ಬರುತ್ತದೆ' ಎಂದು ಅಭಿಪ್ರಾಯಪಟ್ಟರು.

'ನಾಡಿನ ಶ್ರೇಷ್ಠ ಪರಂಪರೆಯ ಭಾಗವತಿಕೆ ಮತ್ತು ಜಾನಪದ ಕಲೆಗಳನ್ನು ಉಳಿಸಿ ಬೆಳೆಸುವುದು ಇಂದಿನ ತಲೆಮಾರಿನ ಕರ್ತವ್ಯವಾಗಿದೆ. ಮಾಜಿ ಮುಖ್ಯಮಂತ್ರಿ ದಿ.ಎಸ್. ಬಂಗಾರಪ್ಪ ಅವರು ಗ್ರಾಮೀಣ ಕಲಾವಿದರು ಮತ್ತು ಭಾಗವತರನ್ನು ಗುರುತಿಸಿ ರಾಜ್ಯ ಪ್ರಶಸ್ತಿ ನೀಡಿ ಗೌರವಿಸುವ ಮೂಲಕ ರಾಜ್ಯದಲ್ಲಿ ದೊಡ್ಡ ಸಾಂಸ್ಕೃತಿಕ ಕ್ರಾಂತಿಯನ್ನೇ ಮಾಡಿದ್ದಾರೆ' ಎಂದು ಟಿಎಪಿಸಿಎಂಎಸ್ ಅಧ್ಯಕ್ಷ ಕೆ.ವಿ ಗೌಡ ತಿಳಿಸಿದರು.

ಮುಖ್ಯ ಶಿಕ್ಷಕ ಎಚ್.ಎಸ್. ಪ್ರಭಾಕರ್ ಮಾತನಾಡಿದರು. ಹಿರಿಯ ಭಾಗವತ ಚಂದ್ರಪ್ಪ ದ್ಯಾವಪ್ಪ, ಸಂಘದ ಅಧ್ಯಕ್ಷ ಚಂದ್ರಶೇಖರ್ ಪಾಟೀಲ್, ಪ್ರಮುಖರಾದ ಅರುಣ್ ಕುಮಾರ್ ಗೌಡ ಕಡಸೂರು, ದಾನಶೇಖರ್ ಪಾಟೀಲ್, ಎ.ಕೆ. ಗಂಗಾಧರ್, ಜಗದೀಶ್, ಶಿಕ್ಷಕ ಎಚ್.ಎಸ್. ಪ್ರಭಾಕರ್, ಜಯರಾಮ್ ಜೋಗಳೇಕರ್, ಹರೀಶ್ ಗೌಡ, ಶಿವಮೂರ್ತಿ ಗೌಡ ಸೇರಿದಂತೆ ಇತರರಿದ್ದರು.

# ರಂಗೋಲಿ ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲರಿಗೂ ಸಮಾಧಾನಕರ ಬಹುಮಾನ ವಿತರಣೆ: ಪಿ ರವಿಕುಮಾರ್



■ ರಾಜಯೋಗ, ಮಂಡ್ಯ

ಬೂದನೂರು ಉತ್ಸವ ಪ್ರಯುಕ್ತ 30 ಗ್ರಾಮಗಳಲ್ಲಿ ರಂಗೋಲಿ ಸ್ಪರ್ಧೆಯನ್ನು ಆಯಾಯಾ ಗ್ರಾಮಗಳಲ್ಲಿ ಏರ್ಪಡಿಸಲಾಗಿದ್ದು ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲರಿಗೂ ಸಮಾಧಾನಕರ ಬಹುಮಾನವನ್ನು ವಿತರಿಸಲಾಗುವುದು ಮತ್ತು ಪ್ರತಿಯೊಂದು ಗ್ರಾಮಕ್ಕೂ ಪ್ರಥಮ,ದ್ವಿತೀಯ,ತೃತೀಯ ಬಹುಮಾನಗಳನ್ನು ವಿತರಿಸಲಾಗುವುದು ಎಂದು ಜಿಲ್ಲಾ ಶಾಸಕರಾದ ಪಿ ರವಿಕುಮಾರ್ ರವರು ಹೇಳಿದರು.

ಬೂದನೂರು ಉತ್ಸವ 2026ರ ಪ್ರಯುಕ್ತ ಬೂದನೂರು ಗ್ರಾಮದಲ್ಲಿ ಏರ್ಪಡಿಸಲಾಗಿದ್ದ ರಂಗೋಲಿ ಸ್ಪರ್ಧೆಯಲ್ಲಿ ಬಿಡಿಸಿರುವ ರಂಗೋಲಿಗಳನ್ನು ವೀಕ್ಷಣೆ ಮಾಡಿ ಮಾತನಾಡಿ ಬೂದನೂರು ಗ್ರಾಮದ ರಂಗೋಲಿ ಸ್ಪರ್ಧೆಯಲ್ಲಿ ವಿವಿಧ ರೀತಿಯ ರಂಗೋಲಿಗಳಾದ ಕಾಂತಾರ, 3ಆ ರಂಗೋಲಿ ಮತ್ತು ಗೃಹಲಕ್ಷ್ಮಿ ಯೋಜನೆಯ ಕುರಿತು ಮಾಹಿತಿ ನೀಡುವಂತಹ ವಿವಿಧ ರೀತಿಯಲ್ಲಿ ರಂಗೋಲಿಯನ್ನು ಬಿಡಿಸಿರುವುದನ್ನು ವೀಕ್ಷಣೆ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ಡಾ.ಕುಮಾರ, ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಯಾದ ಕೆ.ಆರ್ ನಂದಿನಿ, ಉಪ ವಿಭಾಗ ಅಧಿಕಾರಿಯಾದ ಶಿವಮೂರ್ತಿ, ಮಂಡ್ಯ ತಹಸಿಲ್ದಾರ್ ವಿಶ್ವನಾಥ್ ಇನ್ನಿತರರಿದ್ದರು.

## ಆಕಾಶವಾಣಿ: ಅರೆಕಾಲಿಕ ವರದಿಗಾರರ ಹುದ್ದೆಗೆ ಅರ್ಜಿ ಆಹ್ವಾನ

■ ರಾಜಯೋಗ, ಮಂಡ್ಯ

**ಚಿತ್ರದುರ್ಗ:** ಆಕಾಶವಾಣಿಯ ಬೆಂಗಳೂರು ಕೇಂದ್ರದ ಪ್ರಾದೇಶಿಕ ಸುದ್ದಿ ವಿಭಾಗವು ರಾಯಚೂರು ಮತ್ತು ಚಿತ್ರದುಗ-ರ್ ಜಿಲ್ಲೆಗಳ ಅರೆಕಾಲಿಕ ವರದಿಗಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಫೆ.28 ಅರ್ಜಿ ಸಲ್ಲಿಸಲು ಕೊನೆಯ ದಿನ. ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಡಿಪ್ಲೊಮಾ / ಪತ್ರಿಕೋದ್ಯಮ / ಸಮೂಹ ಮಾಧ್ಯಮದಲ್ಲಿ ಪದವಿ ಅಥವಾ ಯಾವುದೇ ಪದವಿಯೊಂದಿಗೆ ಮಾಧ್ಯಮದಲ್ಲಿ ಎರಡು ವರ್ಷಗಳ ಅನುಭವ. ವಯೋಮಿತಿ 24 ರಿಂದ 50 ವರ್ಷ (ಅರ್ಜಿ ಸಲ್ಲಿಸುವ ಕೊನೆಯ ದಿನಕ್ಕೆ ಸರಿಯಾಗಿ), ಅರ್ಜಿದಾರರು ಅರ್ಜಿ ಸಲ್ಲಿಸುವ ಜಿಲ್ಲೆಯ ಜಿಲ್ಲಾ ಕೇಂದ್ರದ ನಿವಾಸಿಯಾಗಿರಬೇಕು. ಅಥವಾ ಕೇಂದ್ರದಿಂದ 10 ಕಿ.ಮೀ. ಒಳಗಿನ ನಿವಾಸಿಯಾಗಿರಬೇಕು. ಕಂಪ್ಯೂಟರ್ ಮತ್ತು ವರ್ಡ್ ಪ್ರಾಸೆಸಿಂಗ್‌ನಲ್ಲಿ ಜ್ಞಾನ ಹೊಂದಿರಬೇಕು. ಸುದ್ದಿ ಸಂಗ್ರಹಕ್ಕೆ ಬೇಕಾದ ಉಪಕರಣಗಳನ್ನು ಹೊಂದಿರಬೇಕು. ವಿದ್ಯುನ್ಮಾನ ಮಾಧ್ಯಮಗಳಲ್ಲಿ ಕೆಲಸ ಮಾಡಿದ ಅನುಭವ ಅಗತ್ಯ.

ಆಸಕ್ತ ಅಭ್ಯರ್ಥಿಗಳು ಪೂರ್ಣ ವಿವರಗಳು, ಅಗತ್ಯ ದಾಖಲಾತಿಗಳ ಪ್ರತಿಗಳು ಒಳಗೊಂಡ ಅರ್ಜಿಗಳನ್ನು, ರಿಜಿಸ್ಟರ್ಡ್ ಅಂಚೆ ಮೂಲಕ ಅಥವಾ ಖುದ್ದಾಗಿ ಇದೇ ಫೆಬ್ರವರಿ 28 ರೊಳಗೆ ತಲುಪುವಂತೆ The Deputy Director General (E), (Attn: Regional News Unit), Akashvani, Raj Bhavan Road, Bengaluru 560 001 ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ 080-22356344 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ದ್ವಿತೀಯ ಪಿಯುಸಿ ಪರೀಕ್ಷೆ: ಹೊಣೆಗಾರಿಕೆಯಿಂದ ಕಾರ್ಯನಿರ್ವಹಿಸಲು ಜಿಲ್ಲಾಧಿಕಾರಿ ಶ್ರೀರೂಪ ಸೂಚನೆ

■ ರಾಜಯೋಗ, ಚಾಮರಾಜನಗರ



ದ್ವಿತೀಯ ಪಿಯುಸಿ ಪರೀಕ್ಷೆ ಇದೇ ಫೆಬ್ರವರಿ 28 ರಿಂದ ಮಾರ್ಚ್ 17ರವರೆಗೆ ನಡೆಯಲಿದ್ದು, ಪರೀಕ್ಷಾ ಕಾರ್ಯವನ್ನು ಪಾರದರ್ಶಕವಾಗಿ ನಡೆಸಲು ನಿಯೋಜಿತ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಶ್ರೀರೂಪ ಸೂಚನೆ ನೀಡಿದರು. ನಗರದ ಜಿಲ್ಲಾಡಳಿತ ಭವನದಲ್ಲಿರುವ ವೀಡಿಯೋ ಕಾನ್ಫರೆನ್ ಸಭಾಂಗಣದಲ್ಲಿಂದು ದ್ವಿತೀಯ ಪಿಯುಸಿ ಪರೀಕ್ಷೆಗೆ ಸಂಬಂಧಿಸಿದಂತೆ ನಡೆದ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಒಟ್ಟು 6285 ಹೊಸ ವಿದ್ಯಾರ್ಥಿಗಳು, 150 ಖಾಸಗಿ ವಿದ್ಯಾರ್ಥಿಗಳು, 474 ಪುನರಾವರ್ತಿತ ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 6909 ವಿದ್ಯಾರ್ಥಿಗಳು ಜಿಲ್ಲೆಯ 17 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗೆ ಹಾಜರಾಗಲಿದ್ದಾರೆ. ಪರೀಕ್ಷಾ ಕಾರ್ಯವು ಮುಕ್ತ, ಸುವ್ಯವಸ್ಥಿತ ಹಾಗೂ ಪಾರದರ್ಶಕವಾಗಿ ನಡೆಯಲು ಅಧಿಕಾರಿಗಳು ಹೊಣೆಗಾರಿಕೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದರು.

ಪರೀಕ್ಷಾ ಕೇಂದ್ರಗಳಿಗೆ ಅವಶ್ಯಕತೆಗನುಗುಣವಾಗಿ ಸೂಕ್ತ ಪೊಲೀಸ್ ಬಂದೋ ಬಸ್ತ್ ಒದಗಿಸಬೇಕು. ಅಗತ್ಯಕ್ಕೆ ತಕ್ಕಂತೆ ಮಹಿಳಾ ಸಿಬ್ಬಂದಿಯನ್ನು ಸಹ ನಿಯೋಜಿಸಬೇಕು. ಪರೀಕ್ಷಾ ಕೇಂದ್ರಕ್ಕೆ ಅನಧಿಕೃತ ವ್ಯಕ್ತಿಗಳು ಅತಿಕ್ರಮ ಪ್ರವೇಶ ಮಾಡದಂತೆ ತಡೆಯಬೇಕು. ಪರೀಕ್ಷಾ ಕೇಂದ್ರಗಳ ಬಳಿ ಅಕ್ರಮಗಳಿಗೆ ಪ್ರಚೋದಿಸುವವರ ವಿರುದ್ದ ಸೂಕ್ತ ಕ್ರಮ ತೆಗೆದುಕೊಳ್ಳಬೇಕು. ಪರೀಕ್ಷಾ ಅಕ್ರಮಗಳಿಗೆ ಆಸ್ಪದ ಕೊಡಬಾರದು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಆರೋಗ್ಯ ಇಲಾಖೆಯಿಂದ ಪ್ರತಿ ಪರೀಕ್ಷಾ ಕೇಂದ್ರಕ್ಕೆ ಇಬ್ಬರು ಶುಶ್ರೂಷಕರನ್ನು ಪ್ರಥಮ ಚಿಕಿತ್ಸೆ ಕಿಟ್ ನೊಂದಿಗೆ ನೇಮಕ ಮಾಡಬೇಕು. ಪರೀಕ್ಷಾ ದಿನಗಳಂದು ವಿದ್ಯಾರ್ಥಿಗಳು ಹಾಗೂ ಪರೀಕ್ಷಾ ಕಾರ್ಯಗಳಿಗೆ ತೊಂದರೆಯಾಗದಂತೆ ನಿರಂತರವಾಗಿ ವಿದ್ಯುತ್ ಪೂರೈಸಬೇಕು.

ಪರೀಕ್ಷಾ ಕೇಂದ್ರಗಳಲ್ಲಿ ಎಲ್ಲ ಮೂಲ ಸೌಕರ್ಯಗಳು ಸಮರ್ಪಕವಾಗಿ ಇರುವಂತೆ ಮೊದಲೇ ನೋಡಿಕೊಳ್ಳಬೇಕು ಎಂದರು.

ಪರೀಕ್ಷಾ ದಿನಗಳಂದು ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಗಳಿಗೆ ತೆರಳಲು ಕೆಎಸ್‌ಆರ್‌ಟಿಸಿ ಬಸ್ಸುಗಳಲ್ಲಿ ಪರೀಕ್ಷಾ ಪ್ರವೇಶ ಪತ್ರ ತೋರಿಸಿ ಉಚಿತವಾಗಿ ಸಂಚರಿಸಲು ಆದೇಶಿಸಲಾಗಿದೆ. ಪರೀಕ್ಷಾ ಸಮಯದಲ್ಲಿ ವಿದ್ಯಾರ್ಥಿಗಳು ನಿಗದಿತ ಸಮಯದಲ್ಲಿ ಪರೀಕ್ಷಾ ಕೇಂದ್ರಗಳಿಗೆ ತಲುಪಲು ಅನುಕೂಲವಾಗುವಂತೆ ಪಟ್ಟಣ ಹಾಗೂ ಎಲ್ಲ ಗ್ರಾಮಾಂತರ ಪ್ರದೇಶಗಳಿಗೆ ಹೆಚ್ಚಿನ ಬಸ್ ವ್ಯವಸ್ಥೆ ಕಲ್ಪಿಸಬೇಕು. ಪರೀಕ್ಷಾ ಕೇಂದ್ರಗಳಿರುವ ಮಾರ್ಗಗಳಲ್ಲಿ ವಿದ್ಯಾರ್ಥಿಗಳು ಕಂಡು ಬಂದಲ್ಲಿ ಕಡ್ಡಾಯವಾಗಿ ಬಸ್ ನಿಲುಗಡೆಗೊಳಿಸಿ ವಿದ್ಯಾರ್ಥಿಗಳಿಗೆ ಸಂಚರಿಸಲು ಅವಕಾಶ ಮಾಡಿಕೊಡಬೇಕು ಎಂದು ಜಿಲ್ಲಾಧಿಕಾರಿಯವರು ಸೂಚಿಸಿದರು. ಪರೀ-ಕ್ಷೆ ಹಾಗೂ ಪ್ರಶ್ನೆ ಪತ್ರಿಕೆಗಳಿಗೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣಗಳ ಮೂಲಕ ಗೊಂದಲ, ಸಂದೇಹ, ಸುಳ್ಳು ವದಂತಿ ಹಬ್ಬಿಸುವ ಹಾಗೂ ರವಾನಿಸುವವರ ವಿರುದ್ದ ಕಾನೂನಿನ ಪ್ರಕಾರ ಅಗತ್ಯ ಕ್ರಮ ತೆಗೆದುಕೊಳ್ಳಲಾಗುತ್ತದೆ. ಎಂದರು.

ಪರೀಕ್ಷಾ ಪಾವಿತ್ರ್ಯತೆಯನ್ನು ಕಾಪಾಡಿಕೊಂಡು ಶಿಸ್ತು ಬದ್ಧವಾಗಿ ಪರೀಕ್ಷಾ ಕಾರ್ಯವನ್ನು ನಿರ್ವಹಿಸಬೇಕು. ಯಾವುದೇ ಲೋಪಗಳಿಗೆ ಅವಕಾಶವಾಗದಂತೆ ಯಶಸ್ವಿಯಾಗಿ ಪರೀಕ್ಷಾ ಕರ್ತವ್ಯವನ್ನು ಪೂರೈಸಬೇಕು ಎಂದು ಜಿಲ್ಲಾಧಿಕಾರಿ ಶ್ರೀರೂಪ ಅವರು ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಪುಟ್ಟಗೌರಮ್ಮ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಸುರೇಶ್, ಖಜಾನೆ ಇಲಾಖೆ ಉಪನಿರ್ದೇಶಕರಾದ ಕೆ.ಎಸ್. ರಾಜೇಶ್ವರಿ, ತಾಲೂಕುಗಳ ತಹಶೀಲ್ದಾರರು, ವಿವಿಧ ಇಲಾಖೆಗಳ ಅಧಿಕಾರಿಗಳು, ಪ್ರಾಂಶುಪಾಲರು ಸಭೆಯಲ್ಲಿ ಉಪಸ್ಥಿತರಿದ್ದರು.

## ದೇವನಹಳ್ಳಿ | ವಿಮಾನ ನಿಲ್ದಾಣದಲ್ಲಿ 23 ಕೋಟಿ ಮೌಲ್ಯದ ಡ್ರಗ್ಸ್ ಜಪ್ತಿ

■ ರಾಜಯೋಗ, ಬೆಂಗಳೂರು

ದೇವನಹಳ್ಳಿ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಾರ್ಯಾಚರಣೆ ನಡೆಸಿದ ಎನ್‌ಸಿಬಿ ಅಧಿಕಾರಿಗಳು, 23.88 ಕೋಟಿ ಮೌಲ್ಯದ ಡ್ರಗ್ಸ್ ಜಪ್ತಿ ಮಾಡಿದ್ದಾರೆ. ಬ್ರೆಜಿಲ್ ದೇಶದ ಪ್ರಜೆಯನ್ನು ಎನ್‌ಸಿಬಿ ಅಧಿಕಾರಿಗಳು ಬಂಧಿಸಿದ್ದಾರೆ. ಆರೋಪಿ ದೋಹಾದಿಂದ ಬೆಂಗಳೂರು ವಿಮಾನ ನಿಲ್ದಾಣ-ಕ್ಕೆ ಬಂದಿದ್ದರು.ಖಚಿತ ಮಾಹಿತಿ ಆಧರಿಸಿ ಮಂಗಳವಾರ ಬೆಳಿಗ್ಗೆ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಲಾಗಿದೆ. ನಾಲ್ಕು ಕೆ.ಜಿ ಕೊಕೇನ್ ಜಪ್ತಿ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಾಲ್ಕು ಹ್ಯಾಂಡ್‌ಬ್ಯಾಗ್‌ಗಳ ತಳಭಾಗದಲ್ಲಿ ಕೊಕೇನ್ ಬಚ್ಚಿಡಲಾಗಿತ್ತು. ಮಾದಕ ವಸ್ತುಗಳ ಸಾಗಣೆಗೆಂದು ಹ್ಯಾಂಡ್‌ಬ್ಯಾಗ್‌ಗಳನ್ನು ವಿಶೇಷವಾಗಿ ವಿನ್ಯಾಸ ಮಾಡಲಾಗಿತ್ತು. ಅದರ ತಳಭಾಗದಲ್ಲಿ ಯಾರಿಗೂ ಪತ್ತೆ ಮಾಡದ ರೀತಿಯಲ್ಲಿ ಡ್ರಗ್ಸ್ ಬಚ್ಚಿಡಲಾಗಿತ್ತು ಎಂದು ಅಧಿಕಾರಿಗಳು ಹೇಳಿದ್ದಾರೆ. ಆರೋಪಿಯ ವಿರುದ್ಧ ಎನ್‌ಡಿಪಿಎಸ್ ಕಾಯ್ದೆ ಅಡಿ ಪ್ರಕರಣ ದಾಖಲು ಮಾಡಿಕೊಳ್ಳಲಾಗಿದೆ ಎಂದು ಎನ್‌ಸಿಬಿ ಅಧಿಕಾರಿಗಳು ತಿಳಿಸಿದ್ದಾರೆ.

# ಆ್ಯಕ್ಷನ್ ಟೀಸರ್‌ನಿಂದ ಅಬ್ಬರಿಸುತ್ತಿರುವ ಹಯಗ್ರೀವ ವಾರಾಂತ್ಯದಲ್ಲಿ ಟ್ರೇಲರ್ ಬಿಡುಗಡೆ




ಇಷ್ಟು ದಿನ ಹಾಡುಗಳಿಂದ ಸೌಂಡ್ ಮಾಡುತ್ತಿದ್ದ 'ಹಯಗ್ರೀವ' ಇದೀಗ ಟೀಸರ್‌ನಿಂದ ಸುದ್ದಿಯಲ್ಲಿದ್ದಾನೆ. ಹೌದು ನಟ ದರ್ಶನ್ ಅವರ 49ನೇ ಹುಟ್ಟುಹಬ್ಬದಂದು ಹಯಗ್ರೀವ ಚಿತ್ರತಂಡ ಆ್ಯಕ್ಷನ್ ಟೀಸರ್‌ನ್ನು ರಿಲೀಸ್ ಮಾಡಿ, ದರ್ಶನ್ ಅವರಿಗೆ ಹುಟ್ಟುಹಬ್ಬದ ಶುಭ ಕೋರಿದೆ. ಈ ಟೀಸರ್ ಜಾಲತಾಣದಲ್ಲಿ ದೊಡ್ಡ ಮಟ್ಟದಲ್ಲಿ ಕ್ರೇಜ್ ಹುಟ್ಟು ಹಾಕಿದೆ. ಈ ವಾರಾಂತ್ಯದಲ್ಲಿ ಟ್ರೇಲರ್ ಬಿಡುಗಡೆ ಮಾಡುವುದಾಗಿ ಹಯಗ್ರೀವ ಚಿತ್ರತಂಡ ತಿಳಿಸಿದೆ. ಸದ್ಯ ರಿಲೀಸ್ ಆಗಿರುವ ಟೀಸರ್‌ನಲ್ಲಿ ಚಿತ್ರದ ನಾಯಕ ಧನ್ವೀರ್ ಶರ್ಟ್ ಲೆಸ್ ಆಗಿ ಸಿಕ್ಸ್‌ಪ್ಯಾಕ್ ಪ್ರಧರ್ಶಿಸುತ್ತಾ, ರೌಡಿಗಳನ್ನು ಬೆಂಡೆತ್ತುವ ಮಾಸ್ ಆ್ಯಕ್ಷನ್ ದೃಶ್ಯಗಳಲ್ಲಿ ಕಾನಿಸಿಕೊಂಡಿದ್ದಾರೆ. ಇದರಲ್ಲಿ ಅವರು, 'ನನಗೆ ತಾಳ್ಮೆ ಸ್ವಲ್ಪ ಕಮ್ಮಿ. ಯಾಕಂದ್ರೆ ಚಾಮುಂಡೇಶ್ವರಿ ತಾಯಿ ನಮ್ಮ ಮಮ್ಮಿ' ಎಂಬ ಡೈಲಾಗ್ ಗಮನ ಸೆಳೆದಿದೆ. ಟೀಸರ್ ಆರಂಭದಲ್ಲಿ ಧನ್ವೀರ್ ದರ್ಶನ್ ಬಗ್ಗೆ ತಮ್ಮ ಅಭಿಮಾನದ ಮಾತುಗಳನ್ನಾಡಿರುವುದು ದರ್ಶನ್ ಅಭಿಮಾನಿಗಳ ಸಂಭ್ರಮ ಹೆಚ್ಚಿಸಿದೆ.

ಹಯಗ್ರೀವ' ಚಿತ್ರದ ನಾಯಕನಾಗಿ ಧನ್ವೀರ್ ಅಭಿನಯಿಸಿದ್ದರೆ, ನಾಯಕಿಯಾಗಿ ಸಂಜನಾ ಆನಂದ್ ಬಣ್ಣ ಹಚ್ಚಿದ್ದಾರೆ. ಇದೇ ಫೆಬ್ರವರಿ 27ರಂದು ರಾಜ್ಯಾದ್ಯಂತ ಅದ್ದೂರಿಯಾಗಿ ಸಿನಿಮಾ ತೆರೆಗೆ ಬರಲಿದೆ. ಕೆ.ವಿ.ಸಿ ಪ್ರೊಡಕ್ಷನ್ಸ್ ಬ್ಯಾನರ್‌ನಲ್ಲಿ ಶ್ರೀಮತಿ ಪದ್ಮಾ ಸಮೃದ್ಧಿ ಮಂಜುನಾಥ್ ನಿರ್ಮಾಣ ಮಾಡಿದ್ದಾರೆ. ವಿರಾಟ್ ಸಾಯಿ ಕ್ರಿಯೇಷನ್ಸ್ ಅರ್ಪಿಸುವ ಈ ಚಿತ್ರಕ್ಕೆ ಮಹೇಶ್ ಗೌಡ ಕಾರ್ಯಕಾರಿ ನಿರ್ಮಾಪಕರಾಗಿ ಕಾರ್ಯ ನಿರ್ವಹಿಸಿದ್ದಾರೆ.

ಜೋಡಾ ಸ್ಯಾಂಡಿ ಸಂಗೀತ ಸಂಯೋಜಿಸಿರುವ ಈ ಚಿತ್ರಕ್ಕೆ ಗಿರೀಶ್ ಆರ್ ಗೌಡ ಛಾಯಾಗ್ರಹಣ, ಸೈಲೇಶ್ ಕುಮಾರ್ ಹಾಗೂ ಚೇತನ್ ಸಿದ್ ಸಂಭಾಷಣೆ, ಭೂಷಣ್ ನೃತ್ಯ ನಿರ್ದೇಶನ, ಕೆ.ಎಂ. ಪ್ರಕಾಶ್ ಸಂಕಲನ, ಡಾ. ಕೆ.ರವಿವರ್ಮ, ಡಿಫರೆಂಟ್ ಡ್ಯಾನಿ, ಅರ್ಬನ್ ರಾಜ್ ಸಾಹಸವಿದೆ. ಚಿತ್ರದ ತಾರಾಗಣದಲ್ಲಿ ಸಾಧು ಕೋಕಿಲ, ಶರತ್ ಲೋಹಿತ್ತ್ವರ, ರಮೇಶ್ ಭಟ್, ಅಶ್ವಿನಿ ಗೌಡ, ಶೋಭರಾಜ್, ಸಂಗೀತಾ, ಕೃಷ್ಣ ಹೆಬ್ಬಾಳೆ, ಅಶ್ವಿನ್ ಹಾಸನ್, ಗಿಲ್ಲಿ ನಟ ಮುಂತಾದವರು ಇದ್ದಾರೆ.

# ... ಅಶೋಕನ ಟ್ರೇಲರ್ ನೋಡಿ ಮೆಚ್ಚಿದ ಸ್ಯಾಂಡಲ್‌ವುಡ್ ಸ್ಟಾರ್‌ಗಳು

## 1970ರ ಕಾಲಘಟ್ಟದ ಟ್ರೇಲರ್‌ಗೆ ಅಭಿಮಾನಿಗಳು ಫಿದಾ!




ಸತೀಶ್ ನೀನಾಸಂ ಹಾಗೂ ಸಪ್ತಮಿ ಗೌಡ ಅಭಿನಯದ ಬಹು ನಿರೀಕ್ಷಿತ 'ದಿ ರೈಸ್ ಆಫ್ ಅಶೋಕ' ಚಿತ್ರದ ಟ್ರೇಲರ್ ಬಿಡುಗಡೆ ಆಗಿದೆ. ಇತ್ತೀಚೆಗೆ ಬೆಂಗಳೂರಿನ ಜಿ.ಟಿ ಮಾಲ್ ನಲ್ಲಿ ನಡೆದ ಅದ್ದೂರಿ ಕಾರ್ಯಕ್ರಮದಲ್ಲಿ ಟ್ರೇಲರ್‌ನ್ನು ನಟರಾದ ಕ್ರೇಜಿ ಸ್ಟಾರ್ ರವಿಚಂದ್ರನ್, ದುನಿಯಾ ವಿಜಯ್, ದಿಗಂತ ಮಂಚಾಲೆ, ಲೂಸಮಾದ ಯೋಗಿ, ವಸಿಷ್ಠ ಎನ್. ಸಿಂಹ, ಶಿವರಾಜ್ ಕೆಆರ್ ಪೇಟೆ, ನಾಗಭೂಷಣ ರಿಲೀಸ್ ಮಾಡಿ ಶುಭ ಹಾರೈಸಿದರು. 1970ರ ಕಾಲಘಟ್ಟದಲ್ಲಿ ಸಿನಿಮಾದ ಸ್ಕ್ರೀನ್ ಪ್ಲೇ ಇದ್ದು, ವ್ಯಾಪಾರಿಗಳು ಮತ್ತು ಕೂಲಿ ಕಾರ್ಮಿಕರ ನಡುವಿನ ಸಂಘರ್ಷದ ಕಥಾಹಂದರ ಹೊಂದಿದೆ.

ಟ್ರೇಲರ್ ಬಿಡುಗಡೆ ಸಂದರ್ಭದಲ್ಲಿ ಮಾತನಾಡಿದ ನಟ ಕಮ್ ನಿರ್ಮಾಪಕ ಸತೀಶ್ ನೀನಾಸಂ, 'ನಮ್ಮ ಎರಡುವರೆ ವರ್ಷದ ಶ್ರಮ ಇಂದು ಸಾರ್ಥಕ ಆಯ್ತು. ಇದೇ ಫೆಬ್ರವರಿ 27ರಂದು ಸಿನಿಮಾ ಬಿಡುಗಡೆ ಆಗುತ್ತಿದೆ. ನನ್ನ ಎಲ್ಲಾ ಗೆಳೆಯರು ಟ್ರೇಲರ್ ರಿಲೀಸ್ ಮಾಡತಾ ಇರೋದು ಖುಷಿ ಇದೆ. ನಾನು ಕನ್ನಡದ ಜೊತೆಗೆ ತೆಲುಗು, ತಮಿಳು ಭಾಷೆಗೆ ಸಿನಿಮಾ ಮಾಡುತ್ತೇನೆ ಎಂದಾಗ ಇವನಿಗೆ ಹುಚ್ಚು ಹಿಡಿದಿದೆ ಎಂದರು. ನಮ್ಮ ತಂಡ ಕಷ್ಟಪಟ್ಟು ಚಿತ್ರ ಮಾಡಿತು. ಸಿನಿಮಾ ನೋಡಿ ತಮಿಳು, ತೆಲುಗು ಭಾಷೆಯಲ್ಲಿ ವಿತರಕರೆ ಖರ್ಚು ಮಾಡಿ ರಿಲೀಸ್ ಮಾಡಲು ಒಪ್ಪಿಕೊಂಡಿದ್ದಾರೆ' ಎಂದರು.

ವೃದ್ಧಿ ಕ್ರಿಯೆಷನ್ ಹಾಗೂ ಸತೀಶ್ ಪಿಕ್ಚರ್ ಹೌಸ ಬ್ಯಾನರ್‌ನಲ್ಲಿ ವರ್ಧನ್ ಹರಿ, ಜೈಷ್ಣವಿ ಹಾಗೂ ಸತೀಶ್ ನೀನಾಸಂ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ವಿನೋದ ವಿ ಧೊಂಡಾಳೆ ನಿರ್ದೇಶನ ಮಾಡಿದ್ದಾರೆ. ವೇದಿಕೆಯಲ್ಲಿ ಮಾತನಾಡಿದ ನಿರ್ಮಾಪಕ ವರ್ಧನ್ ಹರಿ, 'ಇದೇ ಫೆ. 27ರಂದು ನಮ್ಮ ಸಿನಿಮಾ ಕನ್ನಡ, ತಮಿಳು, ತೆಲುಗು ಭಾಷೆಯಲ್ಲಿ ರಿಲೀಸ್ ಆಗುತ್ತಿದೆ. ಸಿನಿಮಾ ನೋಡಿದವರು ಇಷ್ಟ ಪಟ್ಟಿದ್ದಾರೆ. ಕೆ.ವಿ.ಎನ್ ವಿತರಣಾ ಸಂಸ್ಥೆಯ ಸುಪ್ರೀತ್ ಸೇರಿದಂತೆ ಬೇರೆ ಭಾಷೆಯ ವಿತರಕರು ಸಿನಿಮಾ ನೋಡಿ ದೊಡ್ಡ ಮಟ್ಟದಲ್ಲಿ ರಿಲೀಸ್ ಮಾಡುತ್ತಿದ್ದಾರೆ. ನಾಯಕ ನಾಯಕಿ ತುಂಬಾ ಚನ್ನಾಗಿ ಪ್ರಮೋಟ್ ಮಾಡಿದ್ದಾರೆ. ಹಾಗಾಗಿ ಎಲ್ಲಾ ಕಡೆ ಚಿತ್ರಕ್ಕೆ ಉತ್ತಮ ರೆಸ್ಪಾನ್ಸ್ ಇದೆ' ಎಂದರು. ಸಂಗೀತ ನಿರ್ದೇಶಕ ಪೂರ್ಣ ಚಂದ್ರ ತೇಜಸ್ವಿ, 'ಸಿನಿಮಾ ಶುರು ಮಾಡಿದಾಗ ಇಷ್ಟು ದೊಡ್ಡ ಮಟ್ಟದಲ್ಲಿ ಆಗುತ್ತೆ ಅಂದುಕೊಂಡಿರಲಿಲ್ಲ. ತುಂಬಾ ಚನ್ನಾಗಿ ಸಿನಿಮಾ ಬಂದಿದೆ. ನಿಮ್ಮಗಳ ಸಹಕಾರ ಇರಲಿ' ಎಂದು ಹೇಳಿದರು. ಇದೇ ಸಂದರ್ಭದಲ್ಲಿ ನಾಯಕಿ ಸಪ್ತಮಿ ಗೌಡ ಸೇರಿದಂತೆ ಕಲಾವಿದರಾದ ಯಶ್ ಶೆಟ್ಟಿ, ಸಂಪತ್ ಮೈತ್ರಿಯ, ಡ್ರ್ಯಾಗನ್ ಮಂಜು ಮುಂತಾದವರು ತಮ್ಮ ಅನುಭವ ಹಂಚಿಕೊಂಡರು.




# ಹೃತಿಕ್ ಜೊತೆ ಆತ್ಮೀಯತೆ ; ದ್ವೇಷದ ಅಗ್ನಿಯಲ್ಲಿ ಸುಡುತ್ತಿದ್ದ ಬಾಯ್‌ಫ್ರೆಂಡ್ – ಬ್ರೇಕಪ್ ಬಗ್ಗೆ ಮಾತನಾಡಿದ ಮೃಣಾಲ್





ಪ್ರೀತಿ ಎನ್ನುವುದು ಮಾಯೆ. ಆ ಮಾಯೆ ಇಲ್ಲದೆ ಬದುಕಿಲ್ಲ. ಬದುಕು ಸುಂದವಾಗಿ ಇರಬೇಕು ಎಂದರೆ ಪ್ರೀತಿಯ ಮಾಯೆ ನಮ್ಮನ್ನು ಸುತ್ತುತ್ತಿರಬೇಕು. ಹೀಗಾಗಿಯೇ ಪ್ರೀತಿಗಾಗಿ ಮನುಷ್ಯ ಹಾತೊರೆಯುತ್ತಾನೆ. ಆದರೆ ಕೆಲ ಒಮ್ಮೆ ಇದೇ ಪ್ರೀತಿಯ ವಿಷಯದಲ್ಲಿ ಮನುಷ್ಯ ಎಡವುತ್ತಾನೆ. ಸಿಕ್ಕ ಪ್ರೀತಿಯನ್ನು ಉಳಿಸಿಕೊಳ್ಳುವಲ್ಲಿ ವಿಫಲನಾಗುತ್ತಾನೆ. ಇದಕ್ಕೆ ಹತ್ತು ಹಲವು ಕಾರಣಗಳಿವೆಯಾದರೂ ಆ ಪೈಕಿ ಅಸೂಯೆ ಕೂಡ ಒಂದು.

ಹೌದು, ಎಲ್ಲರಿಗೆ ಗೊತ್ತಿರುವಂತೆ ತಿಳಿವಳಿಕೆ, ನಂಬಿಕೆ, ಸಕಾರಾತ್ಮಕ ಭಾವನೆಯೇ ಪ್ರೀತಿಯ ಅಡಿಪಾಯ. ಆದರೆ ಒಮ್ಮೊಮ್ಮೆ ಈ ಸಂಬಂಧದಲ್ಲಿ ನುಸುಳುವ ಅಸೂಯೆ ಅಡಿಪಾಯವನ್ನೇ ಬುಡಮೇಲಾಗಿಸುತ್ತೆ. ನಿಜಾ ಸಂಬಂಧ ಅಂದ ಮೇಲೆ ಅಸೂಯೆ ಸಾಮಾನ್ಯ. ಆದರೆ ಅದು ಮೀರಿದಾಗ ಹಲವು ವರ್ಷಗಳ ಸಂಬಂಧ ಮುರಿದು ಬೀಳುತ್ತೆ. ಮನದಲ್ಲಿದ್ದ ಪ್ರೀತಿ ಮಣ್ಣು ಪಾಲಾಗುತ್ತೆ. ಉದಾಹರಣೆಗೆ ಮೃಣಾಲ್ ಠಾಕೂರ್ ಅವರ ಪ್ರೇಮಕಥೆಯನ್ನೇ ತೆಗೆದುಕೊಳ್ಳಿ.

ಹೌದು, ಮೃಣಾಲ್ ಠಾಕೂರ್... ಹುಟ್ಟಿದ್ದು ಮಹಾರಾಷ್ಟ್ರದಲ್ಲಿ ಆದರೂ, ದಕ್ಷಿಣದೆಲ್ಲೆಡೆ ಅಭಿಮಾನಿ ಬಳಗವನ್ನ ಹೊಂದಿರುವ ಚೆಲುವೆ. ''ಸೀತಾ ರಾಮಂ'' .. ''ಹಾಯ್ ನನ್ನಾ'' .. ''ಫ್ಯಾಮಿಲಿ ಸ್ಟಾರ್'' .. ಹೀಗೆ ಒಂದಾದ ಮೇಲೊಂದು ತೆಲುಗು ಸಿನಿಮಾಗಳ ಮೂಲಕ ಜನ ಮನ ಗೆದ್ದ ಮೃಣಾಲ್ ಸದ್ಯ ತಮ್ಮ ಮೂಲ ಸ್ಥಳಕ್ಕೆ ಮರಳಿದ್ದಾರೆ. ಒಂದರ ಹಿಂದೆ ಒಂದರಂತೆ ಹಿಂದಿ ಚಿತ್ರಗಳಲ್ಲಿ ಅಭಿನಯಿಸುತ್ತಿದ್ದಾರೆ. ಆ ಪೈಕಿ ಇವರ ''ದೋ ದಿವಾನೆ ಶೆಹರ್ ಮೇ'' ಚಿತ್ರ ಇದೇ ಫೆಬ್ರವರಿ 20ರಂದು ಬಿಡುಗಡೆಯಾಗಲಿದೆ.

ಈ ಹಿನ್ನೆಲೆ ಚಿತ್ರದ ಪ್ರಚಾರವನ್ನು ಮಾಡುತ್ತಿರುವ ಮೃಣಾಲ್ ಸದ್ಯ ತಮ್ಮ ಮತ್ತೊಂದು ಪ್ರೇಮ ಕಥೆ ಮತ್ತು ವ್ಯಥೆಯನ್ನು ಹಂಚಿಕೊಂಡಿದ್ದಾರೆ. ಹೃತಿಕ್ ರೋಷನ್ ಜೊತೆಗಿನ ನನ್ನ ಆತ್ಮೀಯತೆಯಿಂದ ಆತನ ನಿದ್ದೆಗೆ ಕೊಳ್ಳಿ ಬಿದ್ದಿತ್ತು ಎಂದಿದ್ದಾರೆ.

ಈ ಕುರಿತು ''ರೌನಕ್ ರಜನಿ'' ಅವರಿಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಮೃಣಾಲ್ ಠಾಕೂರ್, ನನ್ನ ಮಾಜಿ ಬಾಯ್‌ಫ್ರೆಂಡ್, ಇಲ್ಲಿಯವನಾಗಿರಲಿಲ್ಲ. ಬದಲಿಗೆ ವಿದೇಶಿಗ ಆಗಿದ್ದ ಎಂದು ಹೇಳಿದ್ದಾರೆ. 2018ರಲ್ಲಿ ನಾನು ಹೃತಿಕ್ ರೋಷನ್ ಜೊತೆ ''ಸೂಪರ್ 30'' ಚಿತ್ರದ ಚಿತ್ರೀಕರಣವನ್ನು ಮಾಡುತ್ತಿದ್ದೆ, ಈ ಸಮಯದಲ್ಲಿ ನನ್ನ ಬಾಯ್‌ಫ್ರೆಂಡ್‌ಗೆ ಅಸುರಕ್ಷತೆ ಮತ್ತು ಅಭದ್ರತೆಯ ಭಾವನೆ ಕಾಡಲು ಶುರುವಾಗಿತ್ತು ಎಂದು ಹೇಳಿದ್ದಾರೆ.

ಹೃತಿಕ್ ರೋಷನ್ ಅವರಂತಹ ಸುಂದರ ಹೀರೋ ಜೊತೆ ಸುತ್ತಾಡುತ್ತಿದ್ದಿದ್ದು, ಶೂಟಿಂಗ್ ಮಾಡುತ್ತಿದ್ದು ಕಂಡು ಅವನು ದ್ವೇಷದ ಅಗ್ನಿಯಲ್ಲಿ ಸುಡುತ್ತಿದ್ದ ಎಂದು ಹೇಳಿರುವ ಮೃಣಾಲ್ ಠಾಕೂರ್, ಹೃತಿಕ್ ರೋಷನ್ ಅವರಂತೆಯೇ ಮಸ್ತುಕಟ್ಟಾಗಿ ಕಾಣಲು ಆತ ಜಿಮ್‌ನಲ್ಲಿ ವರ್ಕೌಟ್ ಮಾಡಲು ಶುರು ಮಾಡಿದ್ದ ಎಂದು ಹೇಳಿದ್ದಾರೆ. ಜಿಮ್‌ನಲ್ಲಿ ಬೆವರು ಸುರಿಸಿ 15-17 ಕೆಜಿ ತೂಕ ಇಳಿಸಿಕೊಂಡ ಎಂದು ಹೇಳಿದ್ದಾರೆ.

ಮುಂದುವರೆದು ಅವನ ಬದಲಾವಣೆ ಕಂಡು ನನಗೆ ಆಶ್ಚರ್ಯವಾಯ್ತು ಎಂದು ಹೇಳಿರುವ ಮೃಣಾಲ್ ಠಾಕೂರ್, ಕೆಲ ದಿನಗಳ ನಂತರ ಅವನು ಏಕಾಏಕಿ ಜಿಮ್ ಹೋಗುವುದನ್ನು ನಿಲ್ಲಿಸಿದ, ಇಷ್ಟೇ ಅಲ್ಲ ಆ ನಂತರ ಸರಿಯಾಗಿ ತಿಂದು ಮತ್ತೆ 20 ಕೆಜೆ ತೂಕ ಹೆಚ್ಚಿಸಿಕೊಂಡ ಎಂದು ಹೇಳಿದ್ದಾರೆ. ಕೇಳಿದರೆ ಸುಸ್ತಾಗಿದೆ ಎನ್ನುತ್ತಿದ್ದ ಎಂದು ಹೇಳಿರುವ ಮೃಣಾಲ್ ನಾನು ಅವನ ಬಳಿ ತೂಕ ಇಳಿಸಿಕೋ ಎಂದು ಯಾವತ್ತು ಹೇಳಿರಲಿಲ್ಲ, ತೂಕ ಹೆಚ್ಚು ಮಾಡ್ಕೋ ಅಂತಾನೂ ಹೇಳಿರಲಿಲ್ಲ ಎಂದು ಹೇಳಿದ್ದಾರೆ. ನಾನು ಬೇರೆಯವರ ಜೊತೆ ಸುತ್ತಾಡುವುದು ಕಂಡು ಅವನಿಗೆ ತುಂಬಾ ಅಸೂಯೆ ಆಗುತ್ತಿತ್ತು ಎಂದಿದ್ದಾರೆ.



ಅಂದ್ಹಾಗೇ ಕೆಲ ದಿನಗಳ ಹಿಂದೆ ''ರಣವೀರ್ ಅಲಾಹಾಬಾದಿಯಾ''ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ್ದ ಮೃಣಾಲ್, ಈ ಸಂದರ್ಶನದಲ್ಲಿ ತಮ್ಮ ಇನ್ನೊಂದು ಲವ್ ಮತ್ತು ಬ್ರೇಕಪ್ ಕಥೆಯನ್ನು ಹೇಳಿದ್ದರು. ನಾನು ನಟಿಯಾಗಿದ್ದಕ್ಕೆ ನನ್ನ ಪ್ರೇಮ ಸಂಬಂಧ ಮುರಿದು ಬಿತ್ತು ಎಂದು ಹೇಳಿದ್ದ ಮೃಣಾಲ್ ಆ ಸಂಬಂಧ ಕೊನೆಯಾದ ನಂತರ ನನಗೆ ನೆಮ್ಮದಿ ಸಿಕ್ತು ಎಂದಿದ್ದರು. ನಮ್ಮ ಇಬ್ಬರ ಆಚಾರ ವಿಚಾರಗಳಲ್ಲಿ ಸಾಕಷ್ಟು ವ್ಯತ್ಯಾಸಗಳಿದ್ದವು ಎಂದು ಹೇಳಿದ್ದ ಮೃಣಾಲ್ ನಿನ್ನದು ತುಂಬಾನೇ ಆತುರದ ವ್ಯಕ್ತಿತ್ವ, ನಾನು ನಿನ್ನನ್ನೂ ಸಹಿಸಲಾರೆ ಎಂದು ಆತ ನನಗೆ ಹೇಳಿದ್ದ ಎಂದು ಹೇಳಿದ್ದರು. ನಿನ್ನ ಸಹವಾಸ ಸಾಕು ಎಂದು ಬಿಟ್ಟು ಹೋದ ಎಂದು ಹೇಳಿದ್ದರು.

# ಹಾಡಿನ ಚಿತ್ರೀಕರಣದೊಂದಿಗೆ ಚೀತಾ ಸಿನಿಮಾಗೆ ಕುಂಬಳಕಾಯಿ





ನೃತ್ಯ ನಿರ್ದೇಶಕ ಕಲೈ ಮಾಸ್ಟರ್ ಮೊದಲಬಾರಿ ನಿರ್ದೇಶನ ಮಾಡಿರುವ 'ಚೀತಾ' ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದೆ. ಇತ್ತೀಚಿಗೆ ರಾಕ್‌ಲೈನ್ ಸ್ಟುಡಿಯೋನಲ್ಲಿ ಚಿತ್ರದ ಸಾಂಗ್ ಶೂಟಿಂಗ್ ಮಾಡಲಾಯಿತು. ಆ ಮೂಲಕ ಚಿತ್ರಕ್ಕೆ ಕುಂಬಳಕಾಯಿ ಒಡೆಯಲಾಗಿದೆ. ಇದೊಂದು ಮಾರ್ಕೆಟ್‌ನಲ್ಲಿ ನಡೆಯುವ ಆ್ಯಕ್ಷನ್ ಕಥೆ ಒಳಗೊಂಡ ಚಿತ್ರ. ಕೊನೆಯ ದಿನದ ಶೂಟಿಂಗ್ ಸಂದರ್ಭದಲ್ಲಿ ಮಾಧ್ಯಮಗಳ ಮುಂದೆ ಚಿತ್ರತಂಡ ಹಾಜರಾಗಿ ಸಿನಿಮಾ ಬಗ್ಗೆ ಮಾಹಿತಿ ನೀಡಿದೆ.

ಮೊದಲು ಮಾತನಾಡಿದ ನಿರ್ದೇಶಕ ರಾಜಾ ಕಲೈಕುಮಾರ್ 'ಇದು ನನ್ನ ನಿರ್ದೇಶನದ ಮೊದಲ ಪ್ರಯತ್ನ. ತಂಡದ ಶ್ರಮದಿಂದ ಅದ್ಭುತವಾಗಿ ಸಿನಿಮಾ ಬರತಾ ಇದೆ. ಇಂದು ಗ್ಲಾಮರ್ ಹಾಗೂ ರೊಮ್ಯಾಂಟಿಕ್ ಸಾಂಗ್ ಮೂರು ತರ ಸೆಟ್ ಹಾಕಿ ಶೂಟ್ ಮಾಡತಾ ಇದ್ದೇವೆ. ಇದೊಂದು ಆಕ್ಷನ್ ಸಿನಿಮಾ. ದೊಡ್ಡ ಬಜೆಟ್‌ನಲ್ಲಿ ತಯಾರಾಗುತ್ತಿದೆ. ಒಟ್ಟು 75 ದಿನ ಶೂಟಿಂಗ್ ಮಾಡಲಾಗಿದೆ. ಸಿನಿಮಾಗಾಗಿ ಮಾರ್ಕೆಟ್ ಸೇರಿದಂತೆ ಹಲವು ಸೆಟ್ ಹಾಕಿದ್ದೇವೆ. ಇದರಲ್ಲಿ ಐದು ಸಾಂಗ್ ಆರು ಫೈಟ್ ಇವೆ. ಮಾರ್ಕೆಟ್‌ಗೆ ಸಂಬಂದಿಸಿದ ಚಿತ್ರ ಆದ್ದರಿಂದ ಸಾಂಗ್‌ನಲ್ಲೂ ಮಾರ್ಕೆಟ್ ಪಿಲ್ ನೀಡಿದ್ದೇವೆ. ನಾನು ಇಂಡಸ್ಟ್ರಿಗೆ ಬಂದು 25 ವರ್ಷ ಆಯ್ತು. ಆ ಅನುಭವದಿಂದ ಸಿನಿಮಾ ಮಾಡಿದ್ದೇನೆ. ಚೀತಾದಲ್ಲಿ ಪ್ರೇಕ್ಷಕರಿಗೆ ಮಾರ್ಕೆಟ್ ಪ್ರಪಂಚ ತೋರಿಸಲಾಗುತ್ತಿದೆ. ಮನರಂಜನೆ, ಕಂಟೆಂಟ್, ಫ್ಯಾಮಿಲಿ ಹೀಗೆ ಎಲ್ಲಾ ಅಂಶ ಚಿತ್ರದಲ್ಲಿದೆ. ಎಲ್ಲರೂ ನ್ಯಾಚುರಲ್ ಆಗಿ ನಟಿಸಿದ್ದಾರೆ.



ರಂಗಾಯಣ ರಘು, ಟೆನಿಸ್ ಕೃಷ್ಣ, ಪ್ರಮೋದ್ ಶೆಟ್ಟಿ, ಶ್ರುತಿ ಹರಿಹರನ್ ಮುಂತಾದ ಹಲವು ಕಲಾವಿದರು ಚಿತ್ರದಲ್ಲಿದ್ದಾರೆ' ಎಂದು ಹೇಳಿದರು.

ನಂತರ ಚಿತ್ರದ ನಿರ್ಮಾಪಕಿ ಪ್ರತಿಭಾ ನರೇಶ್, 'ಇದು ನಮ್ಮ ನಿರ್ಮಾಣದ ಎರಡನೇ ಸಿನಿಮಾ. ಈ ಮೊದಲು 'ಸಂಭವಾಮಿ ಯುಗೇ ಯುಗೇ' ಸಿನಿಮಾ ಮಾಡಿದ್ದೇವು. ತಂಡದ ಶ್ರಮದಿಂದ ಸಿನಿಮಾ ಚನ್ನಾಗಿ ಬಂದಿದೆ' ಎಂದಷ್ಟೇ ಹೇಳಿದರು. 'ಚೀತಾ ಇಂದು ಮುಕ್ತಯವಾಗಿದೆ. ಇದು ಎರಡು ವರ್ಷದ ಲಾಂಗ್ ಜರ್ನಿ. ಹ್ಯಾಪಿಯಾಗಿ ಶೂಟ್ ಮಾಡಿದ್ದೇವೆ. ಆದಷ್ಟು ಬೇಗ ಥಿಯೇಟರ್‌ಗೆ ಬರುವ ಪ್ರಯತ್ನ ಮಾಡುತ್ತೇವೆ. ಮಾರ್ಕೆಟ್‌ನಲ್ಲಿ ಕೆಲಸ ಮಾಡುವ ಕೋಲಿ ಕಲಬೆರಕೆ ಆಹಾರದ ವಿರುದ್ಧ ಹೇಗೆ ಹೋರಾಡುತ್ತಾನೆ ಎಂಬುದು ಚಿತ್ರದ ಕಥೆ' ಎಂದರು ನಾಯಕ ಪ್ರಜ್ವಲ್ ದೇವರಾಜ್. ನಾಯಕಿ ಮೇಘ ಶೆಟ್ಟಿ 'ನನಗೆ ಡಿಪರೆಂಟ್ ಪಾತ್ರ ಇದರಲ್ಲಿದೆ. ಮೆಲ್ಲೋ ಸಾಂಗ್ ಈಗ ಶೂಟ್ ಮಾಡತಾ ಇದ್ದಾರೆ. ನನ್ನನ್ನು ನಾನು ಬೇರೆ ತರಾ ತೋರಿಸಿಕೊಳ್ಳುವ ಪಾತ್ರ ಇದರಲ್ಲಿದೆ' ಎಂದು ಹೇಳಿದರು. ವೇದಿಕೆಯಲ್ಲಿ ಛಾಯಾಗ್ರಹಕ ಗುರುಪ್ರಸಾದ ಸಿನಿಮಾ ಬಗ್ಗೆ ಮಾತನಾಡಿದರು.

This Newspaper is Published by V.Anoop Kumar from 85/j Industrial Suburb, 2nd stage, Yeshwantpur Extension, Bengaluru - 560022 on behalf of V. Anoop Kumar, Edited by V. Anoop Kumar and Printed by V. Anoop Kumar at 85/J, Industrial Suburb, 2nd stage, Yeshwantpur Extension, Bengaluru - 560022